ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 138

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶುಕ್ರವಾರ: 08–05–2026


# ಬಿಜೆಪಿ ಗೆಲುವಿಗೆ ಎಸ್ಐಆರ್ ಕಾರಣ: ಪ್ರಿಯಾಂಕ್ ಖರ್ಗೆ

**ಬೆಂಗಳೂರು, ಮೇ 7–** ಎಸ್ಐಆರ್ ಚುನಾವಣೆಯ ಪ್ರಕ್ರಿಯೆಯಲ್ಲಿ ಒಂದು ಭಾಗ ಮಾತ್ರ. ಅದರ ಹಿಂದೆ ದೊಡ್ಡ ಮಟ್ಟದ ರಾಜಕೀಯ ಮತ್ತು ಆಡಳಿತಾತಕ ತಂತ್ರಗಳು ಕಾರ್ಯನಿರ್ವಹಿಸಿವೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ ಖರ್ಗೆ ಆರೋಪಿಸಿದ್ದಾರೆ.

ಪಶ್ಚಿಮಬಂಗಾಳದ ಚುನಾವಣಾ ಫಲಿತಾಂಶದ ಬಗ್ಗೆ ಪ್ರತಿಕ್ರಿಯಿಸಿರುವ ಅವರು, ಪಶ್ಚಿಮ ಬಂಗಾಳದಲ್ಲಿ 50 ವಿಧಾನಸಭಾ ಕ್ಷೇತ್ರಗಳಲ್ಲಿ ಎಸ್ಐಆರ್ ಮೂಲಕ ಮತದಾರರ ಪಟ್ಟಿಯಿಂದ ತೆಗೆದುಹಾಕಲಾದ ಹೆಸರುಗಳ ಸಂಖ್ಯೆ, ಆ ಕ್ಷೇತ್ರಗಳ ಗೆಲುವಿನ ಅಂತರಕ್ಕಿಂತ ಹೆಚ್ಚಿತ್ತು ಎಂಬ ಆರೋಪಗಳಿವೆ. ಈ ಕ್ಷೇತ್ರಗಳ ಅರ್ಧಕ್ಕಿಂತ ಹೆಚ್ಚು ಸ್ಥಾನಗಳನ್ನು ಬಿಜೆಪಿ ಗೆದ್ದಿದೆ ಎಂದಿದ್ದಾರೆ. ಆರಂಭದಿಂದ, ಅಂತ್ಯದವರೆಗೆ ಫಲಿತಾಂಶಗಳನ್ನು ಪೂರ್ವ ನಿರ್ಧರಿಸಿದ ಬಳಿಕ, ಸ್ವಾಯತ್ತ ಸಂಸ್ಥೆಗಳನ್ನು ಹೇಗೆ ನಿಯಂತ್ರಿಸ ಬಹುದು ಎಂಬುದಕ್ಕೆ ಈ ಚುನಾವಣೆ ಉದಾಹರಣೆಯಾಗಿದೆ ಎಂದು ಟೀಕಿಸಿದ್ದಾರೆ.ಪಶ್ಚಿಮ ಬಂಗಾಳಕ್ಕೆ ಸಂಬಂಧಪಟ್ಟಂತೆ



ಸೀಮಿತವಾಗಿ ಲಾಜಿಕಲ್ ಡಿಸ್ಕ್ರೆಪೆನ್ಸಿಎಂಬ ಹೊಸ ವರ್ಗವನ್ನು ಪರಿಚಯಿಸಲಾಗಿದೆ. ಇದರ ಅಡಿ ಸಂದೇಹಾಸ್ಪದ ಮತದಾರರು ಎಂದು ಗುರುತಿಸಿ, 27 ಲಕ್ಷ ಮಂದಿ ಹೆಸರನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ. ಕೇಂದ್ರ ಅರೆಸೈನಿಕ ಪಡೆಗಳನ್ನು ಅತ್ಯಧಿಕ ಪ್ರಮಾಣದಲ್ಲಿ ನಿಯೋಜಿಸಿ, ನೆಲಮಟ್ಟದಲ್ಲಿ ಮತದಾರರ ಮೇಲೆ ಒತ್ತಡ ಹಾಗೂ ಭೀತಿಯ ವಾತಾವರಣ ನಿರ್ಮಾಣ ಮಾಡಲಾಗಿದೆ. ಜಿಲ್ಲಾ ಪೊಲೀಸ್ ಅಧಿಕಾರಿಗಳು, ನಾಗರಿಕ ಆಡಳಿತಾಧಿಕಾರಿಗಳು ಸೇರಿದಂತೆ ಹಲವು ಅಧಿಕಾರಿಗಳನ್ನು ದೊಡ್ಡ ಪ್ರಮಾಣದಲ್ಲಿ ವರ್ಗಾವಣೆ ಮಾಡಿ, ಅವರ ಬದಲು ಕೇಂದ್ರ ಅಥವಾ ಕೇಂದ್ರ ಸರ್ಕಾರದ ಪರವಾಗಿರುವ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ.ಮತ ಎಣಿಕೆ ಪ್ರಕ್ರಿಯೆಯಲ್ಲಿ ಕೇಂದ್ರ ಸರ್ಕಾರ ಮತ್ತು ಸಾರ್ವಜನಿಕ ವಲಯ ಸಂಸ್ಥೆಗಳ ಸಿಬ್ಬಂದಿಯನ್ನು ಮೇಲ್ವಿಚಾರಕರು ಹಾಗೂ ಏಜೆಂಟ್‌ಗಳಾಗಿ ನೇಮಿಸಲಾಗಿದೆ. ವಿರೋಧ ಪಕ್ಷಗಳಿಗೆ ಅನುಕೂಲಕರವಾಗಿರದ ಮತಗಟ್ಟೆಗಳನ್ನು ಆಯ್ಕೆಮಾಡಿ ಮರುಮತದಾನಕ್ಕೆ ಆದೇಶ ನೀಡಲಾಗಿದೆ. ಮತದಾನದ ಮುನ್ನವೇ ವಿರೋಧ ಪಕ್ಷದ ಕಾರ್ಯಕರ್ತರು ಹಾಗೂ ಶಾಸಕರನ್ನು ಗುರಿಯಾಗಿಸಿಕೊಂಡು ಮುನ್ನೆಚ್ಚರಿಕಾ ಬಂಧನ ಪಟ್ಟಿಗಳನ್ನು ಸಿದ್ಧಪಡಿಸಲಾಗಿತ್ತು ಎಂದು ಅವರು ಆರೋಪಿಸಿದ್ದಾರೆ.ಈ ಎಲ್ಲಾ ಬೆಳವಣಿಗೆಗಳ ಬಳಿಕ, ಬಿಜೆಪಿ ಬಯಸಿದರೆ ಚುನಾವಣಾ ಆಯೋಗ ಅದಕ್ಕಾಗಿ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಂಡಿರುತ್ತದೆ ಎಂಬ ಆರೋಪ ಸಾಮಾಜಿಕ ಜಾಲತಾಣಗಳಲ್ಲಿ ಕೇಳಿ ಬಂದಿದೆ ಎಂದು ಅವರು ದೂರಿದ್ದಾರೆ.

## ಜಿಲ್ಲಾಡಳಿತದಿಂದ ಮೇ.10ರಂದು ಹೇಮರಡ್ಡಿ ಮಲ್ಲಮ್ಮ ಜಯಂತಿ

ಧೈರ್ಯದ ದಾರಿ



**ರಾಯಚೂರು:** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹೇಮರಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಮೇ.10ರ ಬೆಳಿಗ್ಗೆ 10:30ಕ್ಕೆ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ 2ನೇಪುಟಕ್ಕೆ

# ಕುಡಿಯುವ ನೀರಿನ ಸಮಸ್ಯೆಗಳಿಗೆ ಪ್ರಥಮ ಆಧ್ಯತೆ ನೀಡಿ– ಡಿಸಿ. ಪೂವಿತಾ ಎಸ್.



ಧೈರ್ಯದ ದಾರಿ

**ರಾಯಚೂರು.ಮೇ. 7.:** ಬೇಸಿಗೆ ಇರುವುದರಿಂದ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳಿಗೆ ಪ್ರಥಮ ಆಧ್ಯತೆ ನೀಡುವ ಮೂಲಕ ಜಿಲ್ಲೆಯ ಜನರಿಗೆ ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಹೇಳಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆ. ಬಿಸಿಗಾಳಿ ಹಾಗೂ ಜಾನುವಾರುಗಳಿಗೆ ಮೇವಿನ ಲಭ್ಯತೆ ಕುರಿತು ಚರ್ಚಿಸಲು ಅಧಿಕಾರಿಗಳಿಗೆ ಕರೆದ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ರಾಯಚೂರು ಜಿಲ್ಲೆಯ ಯಾವುದೇ ತಾಲ್ಲೂಕಿನಲ್ಲಿ ನೀರಿನ ಸಮಸ್ಯೆಗಳಿರುವ ಗ್ರಾಮಗಳನ್ನು ಗುರುತಿಸಿ ಮುಂಜಾಗ್ರತೆವಹಿಸಬೇಕು. ಈ ಕುರಿತು ಮಾಹಿತಿ ಪಡೆಯಲು ಪ್ರತಿ ಸೋಮವಾರ ವಿಸಿ ಮೂಲಕ ಸಭೆ ಕರೆಯುತ್ತೇನೆ ತಾವು ಇಲ್ಲಿಗೆ ಬರುವುದು ಬೇಕಿಲ್ಲ ಆಯಾ ತಾಲ್ಲೂಕಿನ ಅಧಿಕಾರಿಗಳು ತಾವಿದ್ದ ಸ್ಥಳದಿಂದಲೇ ಮಾಹಿತಿ ಕೊಡಬೇಕು. ಕುಡಿಯುವ ನೀರಿನ ಸಹಾಯವಾಣಿಯಿಂದ ಬರುವ ಕರೆಗಳಿಗೆ ತಕ್ಷಣ ಸ್ಪಂದಿಸಬೇಕು ಎಂದರು.
ನೀರಿನ ಸಮಸ್ಯೆಗಳಿರುವ ಕಡೆ ಖಾಸಗಿ ಬೋರವೆಲ್ ಮತ್ತು ಟ್ಯಾಂಕರಗಳ ಮೂಲಕ ಜನರಿಗೆ ನೀರು ಕೊಡುವ ಕೆಲಸ ಮಾಡಬೇಕು. ನೀರಿನ ಗುಣಮಟ್ಟವನ್ನು ಪರೀಕ್ಷೆ ಮಾಡಬೇಕು. ಜಿಲ್ಲೆಯ ಯಾವ– ಯಾವ ಭಾಗದಿಂದ ಸಮಸ್ಯೆಗಳು ಬರುತ್ತವೆ ಎನ್ನುವುದರ ಕುರಿತು ಪಟ್ಟಿ ಮಾಡಿ. ಕುಡಿಯುವ ನೀರಿಗೆ ಸಂಬಂಧಿಸಿದಂತೆ ಯಾವುದಾದರು ರಿಪೇರಿ ಸೇರಿದಂತೆ ಇತರೆ ಏನಾದರು ಕೆಲಸ ಇದ್ದಲ್ಲಿ ಆಯಾ ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪ್ರಪೋಸಲ್ ಕೊಡಿ. ಇತರೆ ಯಾವುದೇ ಸಮಸ್ಯೆಗಳಿದ್ದರೆ ನಮ್ಮ ಗಮನಕ್ಕೆ ತರಬೇಕು. ಜಾನುವಾರುಗಳಿಗೆ ಮೇವಿನ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕೆಂದು ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ ಕಾಂದೂ ಮಾತನಾಡಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸರಿಯಾದ ಮಾಹಿತಿ ನೀಡಬೇಕು. ಗ್ರಾಮ ಮತ್ತು ನಗರ ಪ್ರದೇಶಗಳಲ್ಲಿ ನೀರಿನ ಸಮಸ್ಯೆಗಳಾಗಬಾರದು ಇದಕ್ಕೆ ಯಾವುದೇ ಅನುದಾನದ ಕೊರತೆ ಇಲ್ಲ ಈ ಕುರಿತು ಅಧಿಕಾರಿಗಳು ಹೆಚ್ಚಿನ ಗಮನಹರಿಸಬೇಕೆಂದು ಹೇಳಿದರು.

ಈ ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೋಹಪಾತ್ರ. ಸಹಾಯಕ ಆಯುಕ್ತರಾದ ಹಂಪಣ್ಣ ಸಜ್ಜನ. ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ಶರಣಬಸವರಾಜು. ರಾಯಚೂರು ತಾಲ್ಲೂಕು ತಹಶಿಲ್ದಾರ ಸುರೇಶ ವರ್ಮಾ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಗೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಿಸಿಲಿನ ನಡುವೆ ಕಾರ್ಮಿಕರ ಸುರಕ್ಷತೆಗೆ ಕ್ರಮ : ಇಒ ಖಾಲೀದ್ ಅಹಮದ್



ಧೈರ್ಯದ ದಾರಿ

**ಮಾನ್ವಿ :** ತಾಲೂಕಿನ ನೀರಮಾನವಿ ಹಾಗೂ ಕಪಗಲ್ ಗ್ರಾಮ ಪಂಚಾಯತಿಗಳಲ್ಲಿ ನರೇಗಾ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿಗಳಿಗೆ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಖಾಲೀದ್ ಅಹಮದ್ ಅವರು ಗುರುವಾರ ಭೇಟಿ ನೀಡಿ ಕಾಮಗಾರಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸರ್ಕಾರದ ಆದೇಶದಂತೆ ನರೇಗಾ ಕೂಲಿ ಕಾರ್ಮಿಕರಿಗೆ ಕುಡಿಯುವ ನೀರು, ನೆರಳಿಗಾಗಿ ಟೆಂಟ್ ಹಾಗೂ ಪ್ರಥಮ ಚಿಕಿತ್ಸೆ ವ್ಯವಸ್ಥೆ ಕಡ್ಡಾಯವಾಗಿ ಕಲ್ಪಿಸಬೇಕೆಂದು ಸೂಚಿಸಿದರು. ಎನ್ಎಂಎಂಎಸ್ ತಂತ್ರಾಂಶದಲ್ಲಿ ಕೂಲಿ ಕಾರ್ಮಿಕರ ಮುಖಚಹರೆ ಆಧಾರಿತ 2ನೇಪುಟಕ್ಕೆ►

# ಸಾರ್ಥಕ 50 ವರ್ಷ ಬಿ.ಎಸ್.ವೈ. ಅಭಿಮಾನೋತ್ಸವ ಕಾರ್ಯಕ್ರಮದ ಪೂರ್ವಭಾವಿ ಸಭೆ




ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಭಾರತೀಯ ಜನತಾ ಪಾರ್ಟಿ ಪಕ್ಷದ ಕಾರ್ಯಾಲಯದಲ್ಲಿ ಸಾರ್ಥಕ 50 ವರ್ಷ ಬಿ.ಎಸ್.ವೈ. ಅಭಿಮಾನೋತ್ಸವ ಕಾರ್ಯಕ್ರಮದ ಅಂಗವಾಗಿ ನಡೆದ ಮಾನ್ವಿ ಮತ್ತು ಸಿರವಾರ ಮಂಡಲ ಕಾರ್ಯಕರ್ತರ ಪೂರ್ವಭಾವಿ ಸಭೆಯಲ್ಲಿ ಮಾಜಿ ಸಂಸದ ಬಿ.ವಿ.ನಾಯಕ ಮಾತನಾಡಿ

ಬಿ.ಎಸ್.ಯಡಿಯುರಪ್ಪ ಕಳೆದ 50 ವರ್ಷಗಳ ರಾಜಕೀಯ ಜೀವನದಲ್ಲಿ ರಾಜ್ಯದಲ್ಲಿ ಬಿಜೆಪಿ ಪಕ್ಷವನ್ನು ಸಧೃಡವಾಗಿ ಕಟ್ಟಿ ಬೆಳೆಸಿ ರಾಜ್ಯದಲ್ಲಿ ಪ್ರಥಮವಾಗಿ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರುವ ಮೂಲಕ ದಕ್ಷಿಣ ಭಾರತದಲ್ಲಿ ಪ್ರಥಮವಾಗಿ ಬಿಜೆಪಿ ಪಕ್ಷಕ್ಕೆ ಹೆಬಾಗಿಲನ್ನು ತೆರೆದ ಕಿರ್ತಿ ಕೂಡ ಬಿ.ಎಸ್.ಯಡಿಯುರಪ್ಪ ರವರಿಗೆ ಸಲ್ಲುತ್ತದೆ ಅವರ ಪಕ್ಷನಿಷ್ಟೆ ,ಪಕ್ಷಕ್ಕೆ ಸಲ್ಲಿಸಿದ ಸೇವೆ ಹಾಗೂ ಅಭಿಮಾನಿಗಳು ಬಿ.ಎಸ್.ಯಡಿಯುರಪ್ಪ ರವರ ಮೇಲೆ ಇಟ್ಟಿರುವ ಅಭಿಮಾನದಿಂದ ಬಿ.ಎಸ್.ಯಡಿಯುರಪ್ಪ ರವರ ಅಭಿಮಾನಿಗಳು ಮೇ.9 ರಂದು ಚಿತ್ರದುರ್ಗದಲ್ಲಿ ಸಾರ್ಥಕ 50 ವರ್ಷ ಬಿ.ಎಸ್.ವೈ. ಅಭಿಮಾನೋತ್ಸವ ಕಾರ್ಯಕ್ರಮವನ್ನು ಅಯೋಜಿಸಿದು ಮಾನ್ವಿ ಮತ್ತು ಸಿರವಾರ ತಾಲೂಕುಗಳ ಬಿಜೆಪಿ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವ ಮೂಲಕ ಬಿ.ಎಸ್.ಯಡಿಯುರಪ್ಪ ರವರ ಹಿರಿತನಕ್ಕೆ ಗೌರವ ಸಲ್ಲಿಸೋಣ.

ಕಳೆದ ವಿಧಾನಸಭೆ ಚುನಾವಣೆಯಲ್ಲಿ ಮಾತುಕೊಟ್ಟಂತೆ ಸ್ಥಳಿಯ ಚುನಾವಣೆಗಳಾದ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ. ಗ್ರಾಮ ಪಂಚಾಯಿತಿ ಯಲ್ಲಿ ಪಕ್ಷವು ಅಯ್ಕೆ ಮಾಡಿದ ಅಭ್ಯರ್ಥಿಗಳ ಗೇಲುವಿಗಾಗಿ ನಮ್ಮ ಶಕ್ತಿ ಸಾಮಾರ್ಥ್ಯವನ್ನು ತೋರಿಸುತ್ತೇವೆ. ಇನ್ನೂ ಎರಡು ವರ್ಷದಲ್ಲಿ ಬರುವ ಮಾನ್ವಿ ಕ್ಷೇತ್ರದ ವಿಧಾನಸಭೆ ಚುನಾವಣೆ ಸೇರಿದಂತೆ ಸ್ಥಳಿಯ ಚುನಾವಣೆಯಲ್ಲಿ ಜೆ.ಡಿಎಸ್. ಪಕ್ಷದೊಂದಿಗೆ ಬಿಜೆಪಿ ಪಕ್ಷ ಹೊಂದಾಣಿಕೆ ಮಾಡಿಕೊ ಳ್ಳುವುದು ರಾಷ್ಟ್ರದ ವರೀಷ್ಠರಿಗೆ ಬಿಟ್ಟ ವಿಷಯವಾಗಿದು, ರಾಜ್ಯ ಮಟ್ಟದಲ್ಲಿ ನಡೆಯುವ ರಾಜಕೀಯ ಧೃವಿಕರಣವನ್ನು ಇಂದು ನಾವು ಪ್ರೇಶ್ನೆ ಮಾಡುವುದಕ್ಕೆ ಆಗುವುದಿಲ್ಲ ಇನ್ನೂ ಎರಡು

ವರ್ಷಗಳಲ್ಲಿ ಮಾನ್ವಿ ಮತ್ತು ಸಿರವಾರ ಮಂಡಲದಲ್ಲಿ ತಳಮಟ್ಟದಲ್ಲಿ ಬಿಜೆಪಿ ಪಕ್ಷವನ್ನು ಸಂಘಟಿಸಿ ಜನರ ಆರ್ಶೀವಾದವನ್ನು ಪಡೆದು ಈ ಬಾರಿ ಮಾನ್ವಿ ಕ್ಷೇತ್ರದಲ್ಲಿ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರೋಣ ಈ ನಿಟ್ಟಿನಲ್ಲಿ ಸಾರ್ಥಕ 50 ವರ್ಷ ಬಿ.ಎಸ್.ವೈ. ಅಭಿಮಾನೋತ್ಸವ ಕಾರ್ಯಕ್ರಮ ಕೂಡ ನೆರವಗಲಿದೆ ಎಂದು ತಿಳಿಸಿದರು.

ಮಾಜಿ ಶಾಸಕ ಗಂಗಾಧರ ನಾಯಕ ಮಾತನಾಡಿ ಬಿಜೆಪಿ ಪಕ್ಷದ ಕಾರ್ಯಕರ್ತರು ಕೇಂದ್ರ ಸರಕಾರದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಜನಪ್ರೀಯ ಕಾರ್ಯಕ್ರಮಗಳು ಹಾಗೂ ಯೋಜನೆಗಳನ್ನು ಫಲಾನುಭವಿಗಳಿಗೆ ತಿಳಿಸಿದಾಗ ಮಾತ್ರ ಮುಂಬರುವ ಸ್ಥಳಿಯ ಸಂಸ್ಥೆಗಳ ಚುನಾವಣೆಯಲ್ಲಿ 2ನೇಪುಟಕ್ಕೆ




ಮೊದಲನೇ ಪುಟದಿಂದ

# ಜಿಲ್ಲಾಡಳಿತದಿಂದ ಮೇ.10ರಂದು ಹೇಮರಡ್ಡಿ ಮಲ್ಲಮ್ಮ ಜಯಂತಿ

ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಸಿದ್ಧಾರ್ಥ ಬುದ್ಧ ವಿಹಾರ ಸಮಿತಿಯ ಅಧ್ಯಕ್ಷ ಆರ್.ರವಿಕುಮಾರ ರಾಂಪೂರು, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ.

ರಾಯಚೂರು ತಾಲೂಕಿನ ಶಕ್ತಿನಗರದ ಕೆಪಿಸಿಎಲ್, ಪಂ.ಜಾತಿ/ ಪಂ.ವರ್ಗದ ನೌಕರರ ಸಂಘದ ಅಧ್ಯಕ್ಷ ಗೌತಮ ಕಟ್ಟಿಮನಿ ಅವರು ಭಗವಾನ್ ಬುದ್ಧರ ಜಯಂತಿ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ಥಕ 50 ವರ್ಷ ಬಿ.ಎಸ್.ವೈ. ಅಭಿಮಾನೋತ್ಸವ ಕಾರ್ಯಕ್ರಮದ ಪೂರ್ವಭಾವಿ ಸಭೆ

ಪಕ್ಷವನ್ನು ಸಂಘಟಿಸಿ ಬಿಜೆಪಿ ಪಕ್ಷದ ಅಭ್ಯರ್ಥಿಗಳನ್ನು ಗೇಲ್ಲಿಸುವುದಕ್ಕೆ ಸಾಧ್ಯವಾಗುತ್ತದೆ. ಎಂದು ತಿಳಿಸಿದರು.

ಸಭೆಯಲ್ಲಿ ಬಿ.ಜೆ.ಪಿ. ಮಾನ್ವಿ ಮಂಡಲ ಅಧ್ಯಕ್ಷರಾದ ವೀರಭದ್ರಗೌಡ ಭೋಗವತಿ, ಸಿರವಾರ ಬಿ.ಜೆ.ಪಿ. ಮಂಡಲ ಅಧ್ಯಕ್ಷರಾದ ಅರ್.ಕೆ.ಅಮರೇಶ ಸಾಹುಕರ್, ಜಿಲ್ಲಾ ರೈತ ಮೋರ್ಚ ಅಧ್ಯಕ್ಷರಾದ ದೊರೆಬಾಬು,ಜಿಲ್ಲಾ ಉಪಾಧ್ಯಕ್ಷರಾದ ಮಲ್ಲಿಕಾರ್ಜುನ ಜಕ್ಕಲದಿನ್ನಿ, ಶರಣೆಗೌಡ ನಕ್ಕುಂದಿ, ವೀರನಗೌಡ ಪೋತ್ನಾಳ್ ವಕೀಲರು,ಅಯ್ಯಪ್ಪ ಮ್ಯಾಕಲ್, ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದರು.

## ಬಿಸಿಲಿನ ನಡುವೆ ಕಾರ್ಮಿಕರ ಸುರಕ್ಷತೆಗೆ ಕ್ರಮ : ಇಓ ಖಾಲೀದ್ ಅಹಮದ್

ಹಾಜರಾತಿಯನ್ನು ದಿನಕ್ಕೆ ಎರಡು ಬಾರಿ ಕಡ್ಡಾಯವಾಗಿ ದಾಖಲಿಸಬೇಕು ಎಂದು ಮೇಟಿಗಳಿಗೆ ಮಾಹಿತಿ ನೀಡಿದರು. ಅಲ್ಲದೆ, ಎನ್‌ಎಂಎಂಎಸ್ ಹಾಜರಾತಿಯನ್ನು ಖುದ್ದಾಗಿ ಪರಿಶೀಲಿಸಿದರು.

ನರೇಗಾ ಯೋಜನೆಯಡಿ 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ವಿಶೇಷಚೇತನರು ಹಾಗೂ ಗರ್ಭಿಣಿಯರಿಗೆ ಶೇಕಡಾ 50 ರಷ್ಟು ಕೆಲಸ ಮಾಡಿದರೂ ಪೂರ್ಣ ಪ್ರಮಾಣದ ಕೂಲಿ ನೀಡಲಾಗುತ್ತಿದೆ ಎಂದು ತಿಳಿಸಿದರು. ಬಿಸಿಲಿನ ತಾಪಮಾನ ಹೆಚ್ಚಿರುವ ಹಿನ್ನೆಲೆ ಕೂಲಿ ಕಾರ್ಮಿಕರು ಬೆಳಗ್ಗೆ ಬೇಗ ಕೆಲಸ ಆರಂಭಿಸಿ ಬೇಗ ಮನೆಗೆ ತೆರಳುವಂತೆ ಸಲಹೆ ನೀಡಿದರು. ಜೊತೆಗೆ ಕಾರ್ಮಿಕರಿಗೆ ನಿರಂತರ ಉದ್ಯೋಗ ಒದಗಿಸುವಂತೆ ಪಿಡಿಓಗಳಿಗೆ ಸೂಚಿಸಿದರು. ಕೂಲಿ ಕಾರ್ಮಿಕರು ನಿರ್ವಹಿಸಿರುವ ಕೆಲಸದ ಪ್ರಮಾಣವನ್ನೂ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕರಾದ ದೀಪಾ ಅರಳಿಕಟ್ಟಿ, ಕಪಗಲ್ ಗ್ರಾಮ ಪಂಚಾಯತಿ ಆಡಳಿತಾಧಿಕಾರಿ ಉಮಾಕಾಂತ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ದೇವಪ್ಪ ಮರಡಿ, ಮಹ್ಮದ್ ಜುಬೇರ್, ಚಿದಾನಂದ ಟಿಸಿ, ಈರೇಶ್ ಟಿಏಇಸಿ, ಟಿಎ ರಂಜಿತ್, ಗ್ರಾಮ ಬಿಎಫ್ಟಿಗಳಾದ ಸಿದ್ದಾರಾಮ, ನಾಗರಾಜ್, ಡಿಇಓಗಳಾದ ನದೀಮ್ ಮುಲ್ಲಾ, ಜಗದೀಶ್, ಜಿಕೆಎಂ ಸುನೀತಾ, ಗ್ರಾಮ ಪಂಚಾಯತಿ ಸಿಬ್ಬಂದಿಗಳು, ಮೇಟಿಗಳು ಹಾಗೂ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

## ಮೇ.9 ರಿಂದ ಎರೆಡು ದಿನ ನಗರದಲ್ಲಿ ಸಂಗಂ ಸಾಹಿತ್ಯ ಪುರಸ್ಕಾರ ಸಮಾರಂಭ



**ಬಳ್ಳಾರಿ, ಮೇ.07:** ನಗರದ ಹೊರ ವಲಯದಲ್ಲಿರುವ ಜ್ಞಾನಾಮೃತ ಕಾಲೇಜಿನಲ್ಲಿ ಮೇ.9 ಮತ್ತು 10 ರಂದು ಎರೆಡು ದಿನಗಳ ಕಾಲ 2025 ರ ಸಂಗಂ ಸಾಹಿತ್ಯ ಪುರಸ್ಕಾರ ಪ್ರದಾನ ಸಮಾರಂಭ ನಡೆಯಲಿದೆ. ಪ್ರಶಸ್ತಿಯು 25 ಸಾವಿರ ರೂ ನಗದು ಹೊಂದಿದೆ. ಸಂಗಂ ಟ್ರಸ್ಟ್ ಅಧ್ಯಕ್ಷ ಡಾ. ವೈ.ಸಿ.ಯೋಗಾನಂದರೆಡ್ಡಿ,ಕಾರ್ಯದರ್ಶಿ ಡಾ.ಕೆ.ಶಿವಲಿಂಗಪ್ಪ ಹಂದಿಹಾಳು ಹೇಳಿದ್ದಾರೆಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿ ನಡೆಸಿ ಈ ವಿಷಯ ತಿಳಿಸಿದರು. ರಾಜ್ಯದ ಮತ್ತು ನೆರೆಯ ರಾಜ್ಯಗಳಿಂದ 103 ಜನ ಸಾಹಿತ್ಯಾಸಕ್ತರು ಆಗಮಿಸಲು ನೋಂದಣಿ ಮಾಡಿಕೊಂಡಿದ್ದಾರೆ. ಪ್ರಶಸ್ತಿ ಪುರಸ್ಕಾರದ ಜೊತೆಗೆ ಸಾಹಿತ್ಯಕ್ಕೆ ಸಂಬಂಧಿಸಿದ ಹಲವಾರು ವಿಷಯಗಳ ಕುರಿತು ಚರ್ಚಾಗೋಷ್ಟಿ, ವಿಚಾರ ಸಂಕಿರಣ ನಡೆಯಲಿವೆ. ಕಾರ್ಯ ಕ್ರಮವನ್ನು ಓ ಎಲ್ ನಾಗಭೂಷಣ ಸ್ವಾಮಿ ಉದ್ಘಾಟಿಸಲಿದ್ದಾರೆ. ಡಾ. ಅರವಿಂದ ಪಟೇಲ್ ಅಧ್ಯಕ್ಷತೆ ವಹಿಸಲಿದ್ದಾರೆ. ನ್ಯಾಷನಲ್ ಬುಕ್ ಟ್ರಸ್ಟ್ ನ ಅಧಿಕಾರಿಗಳಾದ ಡಾ.ಪತ್ತಿಪಾಕ ಮೋಹನ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.ಕಾವ್ಯ ಸಂವಾದದಲ್ಲಿ ಚಿದಾನಂದ ಸಾಲಿ, ರವಿ ಕುಮಾರ್ ಟೆಲೆಕ್ಸ್, ಭುವನಾ ಹಿರೇಮಠ ಹಾಗೂ ನಾಗಣ್ಣ ಕಿಲಾರಿ (ಕನ್ನಡ ) ತಗುಳ ಗೋಪಾಲ, ಕಲ್ಯಾಣ ಕುಂಜು,ಬಾಲ ಸುಧಾಕರ ಮೌಳಿ ( ತೆಲುಗು) ಭಾಗವಹಿಸಲಿದ್ದಾರೆ.ಪ್ರಶಸ್ತಿ ಹಂತದ 5 ಮಂದಿ ಕವಿಗಳೊಂದಿಗೆ ಸಂವಾದ ನಡೆಯಲಿದ್ದು ಅಮರೇಶ್ ನುಗಡೋಣಿ ಪ್ರಶಸ್ತಿ ಪ್ರದಾನ ಮಾಡಿದರೆ, ಅಧ್ಯಕ್ಷತೆಯನ್ನು ಡಾ. ವೈ ಸಿ ಯೋಗಾನಂದ ರೆಡ್ಡಿ ವಹಿಸಲಿದ್ದಾರೆ.2023ರಲ್ಲಿ ಅನುಪಮಾ ಪ್ರಸಾದ್ ಅವರ "ಚೋದ್ಯ" ಕಥಾ ಸಂಕಲನವು, ಚೀಮನಹಳ್ಳಿ ರಮೇಶಬಾಬು ಅವರ 'ಮಂಪರು' ಕಾದಂಬರಿ 2024ರ ಸಂಗಂ ಸಾಹಿತ್ಯ ಪುರಸ್ಕಾರ ಪಡೆದುಕೊಂಡಿತ್ತು.ಈ ವರ್ಷ ಕನ್ನಡದೊಂದಿಗೆ ತೆಲುಗು ಸಾಹಿತ್ಯದ ನುಡಿ ಸಾಂಗತ್ಯವನ್ನು ಚರ್ಚಿಸಲಿದೆ. ಕನ್ನಡ–ತೆಲುಗು ಭಾಷೆಯ 50ಕ್ಕೂ ಹೆಚ್ಚು ಸಾಹಿತಿಗಳು ಕಲಾವಿದರು ಭಾಗವಹಿಸಲಿದ್ದಾರೆ.ಎರಡನೇ ದಿನದ ಕಥಾ ಸಮಯದಲ್ಲಿ ಮಾರುತಿ ಪೌರೋಹಿತಂ ಕರ್ನೂಲ್, ಪೂರ್ಣಿಮಾ ಮಾಳಿಗೆಮನಿ ಶರಣಬಸವ ಗುಡದಿನ್ನಿ, ಮೇಘನಾಥ ರೆಡ್ಡಿ. ಯುವ ಪ್ರಕಾಶಕರ ತವಕ ತಲ್ಲಣ ಗೋಷ್ಠಿಯಲ್ಲಿ ರಾಜೇಂದ್ರ ಪ್ರಸಾದ್,ಮಮತಾ ಸೂರ್ಯ ಕೀರ್ತಿ, ಚಾಂದ್ ಕವಿ ಚಂದ್ರ, ಶ್ರೀ ದಿವ್ಯ, ಮಲ್ಲಿಕಾರ್ಜುನ್ ಶೇಷುಕೊರ್ಲ ಪಾಟಿ ಭಾಗವಹಿಸಲಿದ್ದಾರೆ.ಸಂಜೆಯ ಕವಿಸಮಯದಲ್ಲಿ ನಾಗಿಣಿ ಅಪ್ಪಸಾನಿ, ಲಕ್ಷ್ಣಣ್ ವಿ ಎ,ಸದಾಶಿವ ಸೊರಟೂರು, ಆಶಾ ಜಗದೀಶ ಪಾಲ್ಗೊಳ್ಳಲಿದ್ದಾರೆ. 2025 ರ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಅಮರೇಶ ನಗುಡೋಣಿ ಅವರೊಂದಿಗೆ ಸಂವಾದ ನಡೆಯಲಿದ್ದು ಪಲ್ಲವವೆಂಕಟೇಶ್ ನಡೆಸಿಕೊಡಲಿದ್ದಾರೆ. ರಾಜಶೇಖರ ಹಳೆಮನೆ, ಮಂಜುಳಾ ಗೋನಾಳ್ ಮಾತನಾಡಲಿದ್ದಾರೆಂದು ತಿಳಿಸಿದರು. ಸುದ್ದಿಗೋಷ್ಟಿಯಲ್ಲಿ ಲೇಖಕರಾದ ಡಾ.ದಸ್ತಗಿರಿ ಸಾಬ್ ದಿನ್ನಿ. ಡಾ. ವೀರೇಂದ್ರ ರಾವಿಹಾಳ್, ಬಸವರಾಜ್ ಹರಗಿನದೋಣಿ, ನಾಗರಾಜ್ ಬಸರಕೋಡು ಮೊದಲಾದವರು ಇದ್ದರು.

# ಜಿಲ್ಲಾ ಆರೋಗ್ಯ ಇಲಾಖೆ ವಿವಿಧ ಹುದ್ದೆಗೆ ಅರ್ಜಿ ಆಹ್ವಾನ

**ರಾಯಚೂರು ಮೇ 07:** ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ 2025–26 ನೇ ಸಾಲಿಗೆ ಮಂಜೂರಾಗಿ ಖಾಲಿ ಇರುವ ಹುದ್ದೆಗಳು ತಾಲೂಕಾ ಕಾರ್ಯಕ್ರಮ ವ್ಯವಸ್ಥಾಪಕರು–01 ಹುದ್ದೆ, ಪಂಚಕರ್ಮ ಥೆರಪಿಸ್ಟ್–01 ಹುದ್ದೆ ಆಯುಷ್ ವಿಭಾಗ, ಎಪಿಡಾಮೊಲಿಸ್ಟ್–01 ಹುದ್ದೆ, ಕಮ್ಯೂನಿಟಿ ನರ್ಸ್ 01 ಹುದ್ದೆ ಡಿ.ಎಮ್.ಹೆಚ್.ಪಿ. ಕಾರ್ಯಕ್ರಮ, ಆಪ್ತ ಸಮಾಲೋಚಕರು 01 ಹುದ್ದೆ ಡಿ.ಎಮ್.ಹೆಚ್.ಪಿ. ಕಾರ್ಯಕ್ರಮ, ಆಪ್ತ ಸಮಾಲೋಚಕರು–01 ಹುದ್ದೆ ಎನ್.ಸಿ.ಡಿ. ವಿಭಾಗ, ಲ್ಯಾಬ್ ಟೆಕ್ನೀಷಿಯನ್ 01 ಎನ್.ಟಿ.ಇ.ಪಿ. ಕಾರ್ಯಕ್ರಮ, ಆಡಿಯೋಲಾಜಿಸ್ಟ್–01 ಹುದ್ದೆ, ಆಡಿಯೋಮೆಟ್ರೀಕ್ ಅಸಿಸ್ಟೆಂಟ್–01, ಇನ್‌ಸ್ಟ್ರಕ್ಟರ್ ಫಾರ್ ಹಿಯರಿಂಗ್ ಇಂಪ್ಯಾರಿಡ್ ಚಿಲ್ಡನ್–01, ಜಿಲ್ಲಾ ಡಿ.ಇ.ಐ.ಸಿ. ವ್ಯವಸ್ಥಾಪಕರು–01 ಹುದ್ದೆ, ಒಟ್ಟು 11 ಹುದ್ದೆ ಭರ್ತಿ ಮಾಡಿಕೊಳ್ಳಲು ರಾಷ್ಟ್ರೀಯ ಆರೋಗ್ಯ ಅಭಿಯಾನದ ಮಾರ್ಗಸೂಚಿ ಹಾಗೂ ಷರತ್ತು ಮತ್ತು ನಿಬಂಧನೆಗಳಿಗೆ ಅನುಸಾರ ಗುತ್ತಿಗೆ ಆಧಾರದ ಮೇಲೆ ಮೇರಿಟ್ ಕಮ್ ರೋಷ್ಟರ್ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ದಿನಾಂಕ: 11.05.2026 ದಿಂದ 18.05.2026 ರ ವರೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು. ಸದರಿ ಹುದ್ದೆಗಳಿಗೆ ನೇರ ಸಂದರ್ಶನದ ದಿನಾಂಕವನ್ನು ತಿಳಿಸಲಾಗುವುದೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶುಲ್ಕ ಮರು ಪಾವತಿಗೆ ಮೇ16ಕ್ಕೆ ವಿಸ್ತರಿಸಿದೆ

ಜಿಲ್ಲಾ ಹಿಂದುಳಿದ ವರ್ಗಗಳ ಇಲಾಖೆಯು 2026–27ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ,ಶುಲ್ಕ ಮರು ಪಾವತಿ ಯೋಜನೆಯ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ 16–05–2026 ರವರೆಗೆ ವಿಸ್ತರಿಸಿದೆ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳು ಇದರ ಸದುಪಯೋಗ ಪಡಿದುಕೊಳ್ಳಬೇಕೆಂದು ಜಿಲ್ಲಾ ಹಿಂದುಳಿದ ವರ್ಗಗಳ ಕಣ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್ಸೆಸ್ಸೆಲ್ಸಿ ಸಾಧಕರಿಗೆ ಸನ್ಮಾನ:ಅನುತ್ತೀರ್ಣ ವಿದ್ಯಾರ್ಥಿಗಳ ಮೇಲೂ ವಿಶೇಷ ಗಮನ ಹರಿಸಿ: ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ



**ಯಾದಗಿರಿ:ಮೇ.7:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ 2025–26ನೇ ಸಾಲಿನ ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆ–1ರಲ್ಲಿ ಶೇ.100 ಫಲಿತಾಂಶ ಪಡೆದ ಶಾಲೆಗಳ ಶಿಕ್ಷಕರು ಹಾಗೂ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಅಭಿನಂದನಾ ಸಮಾರಂಭ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ, ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದರು. ಜೊತೆಗೆ ಅನುತ್ತೀರ್ಣರಾದ ವಿದ್ಯಾರ್ಥಿಗಳನ್ನು ಗುರುತಿಸಿ, ಅವರಿಗೆ ವಿಶೇಷ ತರಬೇತಿ ಹಾಗೂ ಮಾರ್ಗದರ್ಶನ ನೀಡುವ ಮೂಲಕ ಮುಂದಿನ ವರ್ಷ ಜಿಲ್ಲೆಯಲ್ಲಿ ಶೇ.100 ಫಲಿತಾಂಶ ತರುವತ್ತ ಶಿಕ್ಷಣ ಇಲಾಖೆ ಅಧಿಕಾರಿಗಳು ಮತ್ತು ಶಿಕ್ಷಕರು ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಜಿಲ್ಲಾಧಿಕಾರಿ ಹರ್ಷಲ್ ಭೋಯರ್, ಈ ವರ್ಷ ಜಿಲ್ಲೆ ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿರುವುದಾಗಿ ಹೇಳಿದರು. ಯುಪಿಎಸ್ಸಿ ಪರೀಕ್ಷೆಯಲ್ಲಿ ಜಿಲ್ಲೆಯ ನಾಲ್ವರು ಅಭ್ಯರ್ಥಿಗಳು ಯಶಸ್ಸು ಸಾಧಿಸಿರುವುದು ಹಾಗೂ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ 86 ಶಾಲೆಗಳು ಶೇ.100 ಫಲಿತಾಂಶ ದಾಖಲಿಸಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಶಿಕ್ಷಣ ಸಚಿವರೂ ಜಿಲ್ಲೆಯ ಸಾಧನೆಯನ್ನು ಪ್ರಶಂಸಿಸಿದ್ದು, ಮುಂದಿನ ವರ್ಷಗಳಲ್ಲಿ ಎಲ್ಲ ಶಾಲೆಗಳೂ ಶೇ.100 ಫಲಿತಾಂಶ ಸಾಧಿಸುವಂತೆ ಪ್ರಯತ್ನಿಸಬೇಕು ಎಂದು ಕರೆ ನೀಡಿದರು. ವಿದ್ಯಾರ್ಥಿಗಳನ್ನು ಭವಿಷ್ಯದ ಸವಾಲುಗಳಿಗೆ ಸಿದ್ಧಗೊಳಿಸುವ ಅಗತ್ಯವಿದೆ. ಇಂದಿನ ಆಧುನಿಕ ಯುಗದಲ್ಲಿ ತಾಂತ್ರಿಕ ಕೌಶಲ್ಯ ಅತ್ಯಂತ ಮುಖ್ಯವಾಗಿದ್ದು, ಶಿಕ್ಷಕರು ತಮ್ಮನ್ನು ತಾವು ತಂತ್ರಜ್ಞಾನಕ್ಕೆ ತಕ್ಕಂತೆ ನವೀಕರಿಸಿಕೊಳ್ಳಬೇಕು. ಜೊತೆಗೆ ವಿದ್ಯಾರ್ಥಿಗಳಲ್ಲಿ ಮೊಬೈಲ್, ಮೊಬೈಲ್‌ಗಳು ಹಾಗೂ ಅಂತರ್ಜಾಲದ ಸದ್ಬಳಕೆಯ ಬಗ್ಗೆ ಜಾಗೃತಿ ಮೂಡಿಸಿ, ಅವರ ಕೌಶಲ್ಯ ಅಭಿವೃದ್ಧಿಗೆ ನೆರವಾಗಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಮಾತನಾಡಿ, ಈ ಬಾರಿ ಜಿಲ್ಲೆಯ ಎಸ್ಸೆಸ್ಸೆಲ್ಸಿ ಫಲಿತಾಂಶ ಶೇ.91.8ಕ್ಕೆ ಏರಿಕೆಯಾಗಿದೆ ಎಂದು ತಿಳಿಸಿದರು. ಕಳೆದ ವರ್ಷ ಕೊನೆಯ ಸ್ಥಾನದಲ್ಲಿದ್ದ ಜಿಲ್ಲೆ ಈ ಬಾರಿ ಯಾರ್‌ಂಕಿನಲ್ಲಿ ಸುಧಾರಣೆ ಕಂಡುಕೊಂಡಿರುವುದು ಸಂತಸದ ವಿಷಯ ಎಂದರು.

ಡಿಡಿಪಿಐ ಚನ್ನಬಸಪ್ಪ ಮುಧೋಳ ಅವರ ಪರಿಶ್ರಮವನ್ನು ಪ್ರಶಂಸಿಸಿದ ಅವರು, ಅನುತ್ತೀರ್ಣರಾದ ವಿದ್ಯಾರ್ಥಿಗಳತ್ತ ವಿಶೇಷ ಗಮನ ಹರಿಸುವ ಅಗತ್ಯವಿದೆ ಎಂದರು. ವಿಶೇಷವಾಗಿ ವಿದ್ಯಾರ್ಥಿನಿಯರು ಬಾಲ್ಯ ವಿವಾಹದಂತಹ ಸಮಸ್ಯೆಗಳಿಗೆ ಒಳಗಾಗದಂತೆ ಹಾಗೂ ವಿದ್ಯಾರ್ಥಿಗಳು ಅನೈತಿಕ ಚಟುವಟಿಕೆಗಳತ್ತ ತಿರುಗದಂತೆ ಶಿಕ್ಷಣ ಇಲಾಖೆ ಸೂಕ್ತ ನಿಗಾವಹಿಸಬೇಕು ಎಂದು ಸೂಚಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಮಾತನಾಡಿ, ಜಿಲ್ಲೆಯಲ್ಲಿ ಖಾಸಗಿ ಶಾಲೆಗಳ ಸಂಖ್ಯೆ ಕಡಿಮೆ ಇದ್ದರೂ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿರುವುದು ಶ್ಲಾಘನೀಯ ಎಂದು ಹೇಳಿದರು. ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಆಧುನಿಕ ತಂತ್ರಜ್ಞಾನ ಪ್ರಮುಖ ಪಾತ್ರವಹಿಸುತ್ತಿದ್ದು, ಅದರತ್ತ ಹೆಚ್ಚು ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಅಶೋಕ ಕೆಂಭಾವಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಚನ್ನಬಸಪ್ಪ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು. ಶೇ.100 ಫಲಿತಾಂಶ ತಂದ ಮುಖ್ಯ ಶಿಕ್ಷಕರು, ಅತಿಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಹಾಗೂ ಅತಿಥಿ ಶಿಕ್ಷಕರನ್ನು ಸನ್ಮಾನಿಸಲಾಯಿತು.ಜಿಲ್ಲಾ ನೋಡಲ್ ಅಧಿಕಾರಿ ಹನುಮಂತ ಸ್ವಾಗತಿಸಿದರು. ಕಿಶನ್ ಪವಾರ್ ಕಾರ್ಯಕ್ರಮ ನಿರೂಪಿಸಿದರು. ಶ್ರೀಮತಿ ಸಂಗೀತಾ ಪ್ರಾರ್ಥಿಸಿದರು.

## ರೈತ ಮಹಿಳೆಯರಿಗೆ "ರೈತ ಸೇವಾ ಶ್ರೀ" ಪ್ರಶಸ್ತಿ ಪ್ರದಾನ



**ಕಲಬುರಗಿ:ಮೇ.7:** ನಗರದ ಸುವರ್ಣ ಭವನ (ಕನ್ನಡ ಭವನ)ದಲ್ಲಿ ಬುಧವಾರ ಶ್ರೀ ದಾನೇಶ್ವರಿ ಸೇವಾ ಸಂಸ್ಥೆ (ರಿ.) ವತಿಯಿಂದ ಸಂಸ್ಥೆಯ 11ನೇ ವಾರ್ಷಿಕೋತ್ಸವ ಅಂಗವಾಗಿ ಪ್ಲಾಸ್ಟಿಕ್ ನಿಷೇಧ ಜಾಗೃತಿ ಕಾರ್ಯಕ್ರಮ, ರೈತ ಮಹಿಳೆಯರಿಗೆ ಉಡಿತುಂಬುವ ಕಾರ್ಯಕ್ರಮ, ಉಚಿತ ಟೈಲರಿಂಗ್ ತರಬೇತಿ ಉದ್ಘಾಟನಾ ಸಮಾರಂಭ ಹಾಗೂ 5 ಜನ ಪ್ರಗತಿಪರ ರೈತ ಮಹಿಳೆಯರಿಗೆ "ರೈತ ಸೇವಾ ಶ್ರೀ" ಪ್ರಶಸ್ತಿಯನ್ನು ವಿತರಣೆ ಮಾಡಲಾಯಿತು.
ಸಂಸ್ಥೆಯ ಅಧ್ಯಕ್ಷರಾದ ಜ್ಯೋತಿ ಆರ್. ಹಿರೇಮಠ ಅವರ ನೇತೃತ್ವದಲ್ಲಿ ನಡೆಯುವ ಈ ಕಾರ್ಯಕ್ರಮದಲ್ಲಿ ಸಮಾಜಮುಖಿ ಕಾರ್ಯಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ವಿಶೇಷವಾಗಿ ರೈತ ಮಹಿಳೆಯರ ಸಾಧನೆಯನ್ನು ಗುರುತಿಸಿ ರೈತ ಮಹಿಳೆಯರಿಗೆ "ರೈತ ಸೇವಾ ಶ್ರೀ" ಪ್ರಶಸ್ತಿ ಪ್ರದಾನ ನೀಡಲಾಯಿತು.
ಕಾರ್ಯಕ್ರಮದಲ್ಲಿ ಮಾಜಿ ಶಾಸಕ ದತ್ತಾತ್ರೇಯ ಸಿ. ಪಾಟೀಲ ರೇವೂರ, ಡಾ. ಸುಧಾ ಹಾಲಕಾಯಿ, ವಿಜಯಕುಮಾರ ಪಾಟೀಲ ತೇಗಲತಿಪ್ಪಿ, ಜ್ಯೋತಿ ಎಂ. ಮರಗೋಳ, ಬಾಬುರಾವ ಪಾಟೀಲ್, ವೀರಸ್ವಾಮಿ, ರಾಚೂಟಯ್ಯ ಹಿರೇಮಠ, ವಿಶ್ವನಾಥ ಸಾಲಿಮಠ, ಸಂಸ್ಥೆಯ ಪದಾಧಿಕಾರಿಗಳು ಹಾಗೂ ಸದಸ್ಯರಾದ ಸುಧಾಕರ ಎಂ. ಇಟಗಿ, ನಾಗಮ್ಮ ಸಿ. ಮಠಪತಿ, ನೀಲಮ್ಮ ಬಿ. ಹಿರೇಮಠ ಸೇರಿದಂತೆ ಸದಸ್ಯರು ಇದ್ದರು.

# ಅಮೆರಿಕ- ಇರಾನ್ ಯುದ್ಧಾಂತ್ಯಕ್ಕೆ ಕಾಲ ಸನ್ನಿಹಿತ



**ವಾಷಿಂಗ್ಟನ್,ಮೇ.7-** ಸಂಘರ್ಷ ಕೊನೆಗೊಳಿಸುವ ನಿಟ್ಟಿನಲ್ಲಿ ಅಮೆರಿಕ-ಇರಾನ್ ಮುಂದಾಗಿದ್ದು ಯುದ್ಧ ಅಂತ್ಯಗೊಳಿಸುವ ಕಾಲ ಸನ್ನಿಹಿತವಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ
ಅಮೆರಿಕ- ಇರಾನ್ ನಡುವೆ ಒಪ್ಪಂದಕ್ಕೆ ಹತ್ತಿರವಾಗಬಹುದು ಎನ್ನುವ ವರದಿ ನಡುವೆಯೂ ಯುದ್ಧವನ್ನು ಕೊನೆಗೊಳಿಸುವ ಅಮೆರಿಕದ ಪ್ರಸ್ತಾಪವನ್ನು "ಇನ್ನೂ ಪರಿಗಣಿಸಲಾಗುತ್ತಿದೆ" ಎಂದು ಇರಾನ್ ಹೇಳಿದೆ.

ಇರಾನ್ ಮುಂದಿಟ್ಟಿರುವ 14 ಅಂಶಗಳ ತಿಳುವಳಿಕೆ ಒಪ್ಪಂದಕ್ಕೆ ಅಮೆರಿಕ ಒಪ್ಪುವ ಸಾಧ್ಯತೆ ಇದೆ, ಈ ಬಗ್ಗೆ ಮತ್ತೊಮ್ಮೆ ಚರ್ಚೆ ನಡೆಸಿ ಅಂತಿಮ ನಿರ್ಧಾರಕ್ಕೆ ಬರುವ ನಿರೀಕ್ಷೆ ಇದೆ ಎಂದು ಹೇಳಲಾಗಿದೆ.

ಅಮೆರಿಕದ ಪ್ರಸ್ತಾಪವನ್ನು ಇರಾನ್ ತಳ್ಳಿ ಹಾಕಿದೆ ಎಂದು ಇರಾನ್ ವಿದೇಶಾಂಗ ಸಚಿವಾಲಯ ಹೇಳಿದ್ದು ಅಮೆರಿಕ- ಇರಾನ್ ನಡುವೆ ಮಧ್ಯವರ್ತಿಯಾಗಿ ಕೆಲಸ ಮಾಡಿದ ಪಾಕಿಸ್ತಾನದೊಂದಿಗೆ ತಮ್ಮ ಅಭಿಪ್ರಾಯ ಹಂಚಿಕೊಳ್ಳುವುದಾಗಿ ಮಾಹಿತಿ ನೀಡಿದೆ.
ಪಾಕಿಸ್ತಾನದ ವಿದೇಶಾಂಗ ಸಚಿವರು ಪ್ರತಿಕ್ರಿಯಿಸಿ ಅಮೆರಿಕ- ಇರಾನ್ ನಡುವೆ ಯುದ್ಧ ಕೊನೆ ಗೊಳಿಸುವ ನಿಟ್ಟಿನಲ್ಲಿ ಹಾಗೂ ಶಾಶ್ವತ ಕದನ ವಿರಾಮ ಅಂತ್ಯಗೊಳಿಸುವ ನಿಟ್ಟಿನಲ್ಲಿ ಎಲ್ಲಾ ಪ್ರಯತ್ನಗಳು ನಡೆಯುತ್ತಿವೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು "ಕಳೆದ 24 ಗಂಟೆಗಳಲ್ಲಿ ಇರಾನ್ ಜೊತೆ ಅಮೆರಿಕ ಉತ್ತಮ ಮಾತುಕತೆ ನಡೆಸಿದೆ" ಎಂದು ಮಾಹಿತಿ ನೀಡಿದ್ದಾರೆ.

ಇರಾನಿನ ಪರಮಾಣು ಪುಷ್ಟೀಕರಣದ ಮೇಲಿನ ಅಮಾನತು, ನಿರ್ಬಂಧಗಳನ್ನು ತೆಗೆದುಹಾಕುವುದು ಮತ್ತು ಹಾರ್ಮುಜ್ ಜಲಸಂಧಿಯ ಮೂಲಕ ಉಚಿತ ಸಾಗಣೆ ಪುನಃಸ್ಥಾಪಿಸುವುದು ಸೇರಿದಂತೆ ಹಲವು ವಿಷಯಗಳಿವೆ ಎನ್ನಲಾಗಿದೆ.
ಅಮೆರಿಕ ಮತ್ತು ಇರಾನ್ ನಡುವಿನ ಮಧ್ಯಸ್ಥಿಕೆಯ ಕುರಿತು ವಿವರಿಸಿದ ಎರಡು ಮೂಲಗಳು "ಅಮೆರಿಕನ್ ಪ್ರಸ್ತಾವನೆಯನ್ನು ಇನ್ನೂ ಇರಾನ್ ಪರಿಶೀಲಿಸುತ್ತಿದೆ. ಆ ನಂತರವೇ ಅಂತಿಮ ನಿರ್ಧಾರಕ್ಕೆ ಬರುವ ಸಾಧ್ಯತೆ ಇದೆ ಎಂದು ಹೇಳಿದೆ.

ಇರಾನ್ ಸಂಸತ್ತಿನ ರಾಷ್ಟ್ರೀಯ ಭದ್ರತೆ ಮತ್ತು ವಿದೇಶಾಂಗ ನೀತಿ ಆಯೋಗದ ವಕ್ತಾರ ಇಬ್ರಾಹಿಂ ರೆಝಾಯಿ ಪ್ರತಿಕ್ರಿಯಿಸಿ "ಅಮೆರಿಕದ ಜೊತೆಗೆ ಮುಖಾ ಮುಖಿ ಮಾತುಕತೆ ನಡೆಸದೆ ಯಾವುದೇ ತೀರ್ಮಾನಕ್ಕೆ ಬರಲು ಸಾಧ್ಯವಾಗದು ಎಂದಿದ್ದಾರೆ.

# ಸಂಸ್ಥಾಪನಾ ದಿನಾಚರಣೆ




**ಲಕ್ಷೆ ೀಶ್ವರ,ಮೇ.7:** "ಕನ್ನಡ ನಾಡಿನ ಅಸ್ಮಿತೆಯ ಪ್ರತೀಕವೇ ಕನ್ನಡ ಸಾಹಿತ್ಯ ಪರಿಷತ್ತು. ಕನ್ನಡ ನಾಡು- ನುಡಿಯ ಸಂರಕ್ಷಣೆ ಮತ್ತು ಕನ್ನಡ ಭಾಷೆಗಾಗಿ ಶ್ರಮಿಸಲು ಕಟ್ಟಲಾಗಿರುವ ಸಮಸ್ತ ಕನ್ನಡಿಗರ ಏಕೈಕ ಪ್ರಾತಿನಿಧಿಕ ಸಂಸ್ಥೆಯಾಗಿದೆ" ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ ಅಭಿಪ್ರಾಯಪಟ್ಟರು. ಅವರು ಲಕ್ಷೆ ೀಶ್ವರದ ಸಕ್ಸಸ್ ಕ್ಲಾಸಸ್ ನಲ್ಲಿ ಲಕ್ಷೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಉಪನ್ಯಾಸಕರಾಗಿ ಭಾಗವಹಿಸಿ ಮಾತನಾಡಿದ ಕ.ಸಾ.ಪ ಲಕ್ಷೆ ೀಶ್ವರ ತಾಲೂಕಾ ಘಟಕದ ಸಂಘಟನಾ ಕಾರ್ಯದರ್ಶಿ,ಸಾಹಿತಿ ನಾಗರಾಜ ಮಜ್ಜಿಗುಡ್ಡ "ಕನ್ನಡ ಸಾಹಿತ್ಯ ಪರಿಷತ್ 1915 ಮೇ 5ರಂದು ಶ್ರೀ ಕೃಷ್ಣರಾಜ ಪರಿಷನ್ಮಂದಿರದಲ್ಲಿ ಆಗಿನ ಮೈಸೂರು ಅರಸರಾಗಿದ್ದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಂದ ಸ್ಥಾಪಿಸಲ್ಪಟ್ಟಿತ್ತು. ಆರಂಭವಾಗುವಾಗ 'ಕರ್ನಾಟಕ ಸಾಹಿತ್ಯ ಪರಿಷತ್' ಎಂದು ನಾಮಕರಣಗೊಂಡರೂ ಮುಂದೆ 1935ರಲ್ಲಿ ಕನ್ನಡ ಸಾಹಿತ್ಯ ಪರಿಷತ್ ಎಂದು ಮರು ನಾಮಕರಣಗೊಂಡಿತು" ಎಂದು ತಿಳಿಸಿದರು.
ಸನ್ಮಾನ ಸ್ವೀಕರಿಸಿ ಮಾತನಾಡಿದ ಲಕ್ಷೆ ೀಶ್ವರ ಪೌರಸೇವಾ ಸಾಧಕ ಬಸವಣ್ಣೆಪ್ಪ ನಂದೆಣ್ಣವರ "ಯಾವುದೇ ಪ್ರಶಸ್ತಿ,ಗೌರವ ಬಯಸದೇ ನಾಲ್ಕು ದಶಕಗಳ ಕಾಲ ಲಕ್ಷೆ ೀಶ್ವರದ ಪೌರ ಸೇವೆ ಮಾಡಿದ ನಮ್ಮಂತವರನ್ನು ಗುರುತಿಸಿ ಗೌರವಿಸಿದ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯ ಸ್ತುತ್ಯಾರ್ಹ" ಎಂದರು.ಭಾಗವಹಿಸಿ ಮಾತನಾಡಿದ ಹಿರಿಯ ಸಾಹಿತಿ ಎಸ್.ಎಫ್.ಆದಿ " ಕನ್ನಡ ಸಾಹಿತ್ಯ ಪರಿಷತ್ತು ಕನ್ನಡದ ಶ್ರೀಮಂತ ಪರಂಪರೆಯನ್ನು ಮತ್ತಷ್ಟು ಸಮೃದ್ಧಗೊಳಿಸುತ್ತಿದೆ. ಅದರಲ್ಲೂ ಗದಗ ಜಿಲ್ಲಾ ಘಟಕ ಹಾಗೂ ಲಕ್ಷೆ ೀಶ್ವರ ತಾಲೂಕ ಘಟಕಗಳು ರಚನಾತ್ಮಕ ಕಾರ್ಯಕ್ರಮಗಳ ಮೂಲಕ ಅತ್ಯಂತ ಕ್ರಿಯಾಶೀಲವಾಗಿವೆ" ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಲಕ್ಷೆ ೀಶ್ವರ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಈಶ್ವರ ಮೆಡ್ಲೇರಿ "ತಿರುಳ್ಗನ್ನಡ ನೆಲವಾದ ಪುಲಿಗೆರೆ ಅಂದರೆ ಈಗಿನ ಲಕ್ಷೇಶ್ವರ ಪ್ರಾಚೀನ ಕಾಲದಿಂದಲೂ ಕನ್ನಡ,ಕನ್ನಡತನದ ಜಾಗೃತಿಯ ನಾಡು. ಹಾಗಾಗಿ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ರಚನಾತ್ಮಕವಾದ ಕಾರ್ಯಕ್ರಮಗಳನ್ನು ನಿರಂತರವಾಗಿ ಸಂಘಟಿಸಲು ಸಾಧ್ಯವಾಗುತ್ತಿದೆ" ಎಂದರು.
ಖ್ಯಾತ ಗಾಯಕ ಮಂಜುನಾಥ ಉಮಚಗಿ ಕನ್ನಡ ಗೀತ ಗಾಯನ ಕಾರ್ಯಕ್ರಮ ನಡೆಸಿಕೊಟ್ಟರು. ಕನ್ನಡ ಭಾಷಾಭಿಮಾನದ ಹಲವಾರು ಗೀತೆಗಳನ್ನು ಹಾಡಿ ರಂಜಿಸಿದರು. ಶಿಕ್ಷಕರಾದ ರಾಜೇಶ ಶೆಟ್ಟರ, ನಾಗರಾಜ ಶರಣಾರ್ಥಿ ಮುಖ್ಯ ಅತಿಥಿಗಳಾಗಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು.ಸಾಧಕರು,ಉದ್ಘಾಟಕರು ಉಪನ್ಯಾಸಕರು,ಆತಿಥೇಯರು, ಗಾಯಕರನ್ನು ಸನ್ಮಾನಿಸಲಾಯಿತು.

ಕ.ಸಾ.ಪ ತಾಲೂಕ ಘಟಕದ ಎಸ್.ಬಿ.ಅಣ್ಣಿಗೇರಿ ಸ್ವಾಗತಿಸಿದರು. ಶಂಕರ ಶಿಳ್ಳಿನ ವಂದಿಸಿದರು. ಶಿಕ್ಷಕ ಪ್ರಕಾಶ ಜ್ಯೋತಿ ಕಾರ್ಯಕ್ರಮ ನಿರೂಪಿಸಿದರು. ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಶಿಕ್ಷಕರಾದ ಪ್ರಭು ಹಾಲಗುಂಡಿ, ಆರ್.ಎಸ್.ಪಾಟೀಲ, ವೈ.ಎಂ.ಶಿರೂರು ಉಪಸ್ಥಿತರಿದ್ದರು. ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಬಿಹಾರ ಸಂಪುಟ ವಿಸ್ತರಣೆ: 31 ನೂತನ ಸಚಿವರ ಪ್ರಮಾಣ ವಚನ

**ಪಾಟ್ನಾ,ಮೇ.7-** ಬಿಹಾರದ ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ತಮ್ಮ ಸಚಿವ ಸಂಪುಟ ವಿಸ್ತರಣೆ ಮಾಡಿದ್ದು ಮಾಜಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಪುತ್ರ ನಿಶಾಂತ್ ಕುಮಾರ್ ಸೇರಿದಂತೆ ಜೆಡಿಯು- ಬಿಜೆಪಿ ನೇತೃತ್ವದ ಮೈತ್ರಿಕೂಟದ 31 ಶಾಸಕರು ನೂತನ ಸಚಿವರಾಗಿ ಇಂದು ಪಮಾಣವಚನ ಸ್ವೀಕರಿಸಿದರು.

ಪಾಟ್ನಾದ ಗಾಂಧಿ ಮೈದಾನದಲ್ಲಿ ನಡೆದ ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೆ ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ಅಧ್ಯಕ್ಷ ನಿತಿನ್ ನಬೀನ್, ಕೇಂದ್ರ ಸಚಿವರಾದ ರಾಜನಾಥ್ ಸಿಂಗ್, ಅಮಿತ್ ಶಾ, ಜೆಪಿ ನಡ್ಡಾ, ಜಿತಿನ್ ರಾಮ್ ಮಾಂಝಿ, ಮುಖ್ಯಮಂತ್ರಿ ಸಮ್ರಾಟ್ ಚೌಧರಿ, ಮಾಜಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಸೇರಿದಂತೆ ಎನ್ ಡಿಎ ಮಿತ್ರ ಪಕ್ಷಗಳ ನಾಯಕರು ಸಾಕ್ಷಿಯಾದರುರಾಜ್ಯಪಾಲ ಲೆಫ್ಟಿನೆಂಟ್ ಜನರಲ್ (ನಿವೃತ್ತ) ಸೈಯದ್ ಅತಾ ಹಸ್ನೈನ್ ನೂತನ ಸಚಿವರಿಗೆ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವವನ ಬೋಧಿಸಿದರು, ಇತ್ತೀಚೆಗಷ್ಟೇ ರಾಜಕೀಯಕ್ಕೆ ಸೇರಿದ್ದ ಮಾಜಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಪುತ್ರ ನಿಶಾಂತ್ ಕುಮಾರ್ ಅವರಿಗೆ ಸಚಿವ ಸಂಪುಟಲ್ಲಿ ಸ್ಥಾನ ದೊರೆತಿದೆ.

ಸಚಿವರಾಗಿ ವಿಜಯ್ ಕುಮಾರ್ ಸಿನ್ಹಾ, ದಿಲೀಪ್ ಕುಮಾರ್ ಜೈಸ್ವಾಲ್, ನಿಶಾಂತ್ ಕುಮಾರ್ ಮತ್ತು ಲೇಶಿ ಸಿಂಗ್, ಭಗವಾನ್ ಸಿಂಗ್ ಕುಶ್ವಾಹ, ಅರುಣ್ ಶಂಕರ್ ಪ್ರಸಾದ್, ಮದನ್ ಸಾಹ್ನಿ, ಸಂತೋಷ್ ಕುಮಾರ್ ಸುಮನ್, ಮತ್ತು ರಾಮ ನಿಶಾದ್, ರಾಮ್ ಕೃಪಾಲ್ ಯಾದವ್, ನಿತೀಶ್ ಮಿಶ್ರಾ, ದಾಮೋದರ್ ರಾವತ್, ಸಂಜಯ್ ಸಿಂಗ್ (ಟೈಗರ್), ಮತ್ತು ಅಶೋಕ್ ಚೌಧರಿ ಪ್ರಮಾಣ ವಚನ ಸ್ವೀಕಾರ ಮಾಡಿದರು.
ವಾಜಿ ವುಖ್ಯವುಂತ್ರಿ ನಿತೀಶ್ ಕುವಾರ್ ಅವರ ಪುತ್ರ ನಿಶಾಂತ್ ಕುಮಾರ್,ಬಿಜೆಪಿ,ಜೆಡಿಯು, ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ಅವರ ಲೋಕ ಜನಶಕ್ತಿ ಪಕ್ಷ ರಾಮ್ ವಿಲಾಸ್ ಮತ್ತು ಕೇಂದ್ರ ಸಚಿವ ಜಿತನ್ ರಾಮ್ ಮಾಂಝಿ ನೇತೃತ್ವದ ಹಿಂದೂಸ್ತಾನಿ ಅವಾಮ್ ಮೋರ್ಚಾ ಜಾತ್ಯತೀತ ಪಕ್ಷದ ಒಟ್ಟು 31 ಶಾಸಕರು ಸಚಿವರಾಗಿ ಪ್ರಮಾಣ ವಚನ ಸ್ವೀಕಾರ ಮಾಡಿದರು
ಪಿಎಂ ರೋಡ್ ಶೋ:
ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೂ ಮುನ್ನ ಪಾಟ್ನಾಕ್ಕೆ ಆಗಮಿಸಿದ ಪ್ರಧಾನಿ



ನರೇಂದ್ರ ಮೋದಿ ವಿಮಾನ ನಿಲ್ದಾಣದಿಂದ ಕಾರ್ಯಕ್ರಮ ನಡೆಯುವ ಸ್ಥಳದ ವರೆಗೆ ಬೃಹತ್ ರೋಡ್ ಶೋ ನಡೆಸಿದರು.

ಈ ವೇಳೆ ರಸ್ತೆಯ ಎರಡೂ ಕಡೆ ಬಿಜೆಪಿ-ಜೆಡಿಯು ಕಾರ್ಯಕರ್ತರ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅದ್ದೂರಿ ಸ್ವಾಗತ ಕೋರಿದರು.ಇತ್ತೀಚೆಗೆ ನಡೆದ ಪಶ್ಚಿಮ ಬಂಗಾಳ ಮತ್ತು ಮತ್ತು ಅಸ್ಸಾಂನಲ್ಲಿ ಬಿಜೆಪಿ ಮತ್ತು ಪುದುಚೆರಿಯಲ್ಲಿ ಬಿಜೆಪಿ ನೇತೃತ್ವದ ಎನ್ ಡಿಎ ಮೈತ್ರಿಕೂಟ ಬಾರಿ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಬಿಹಾರದ ಮುಖ್ಯಮಂತ್ರಿ ಸಮ್ರಾಟ್ ಚೌಧರಿ ಸಚಿವ ಸಂಪುಟ ವಿಸ್ತರಣಗೆ ಅನುವು ಮಾಡಿಕೊಡಲಾಗಿದೆ.
ಬಿಹಾರದಲ್ಲಿ ಕಳೆದ 21 ವರ್ಷಗಳಿಂದ ಮುಖ್ಯಮಂತ್ರಿಯಾಗಿ ಅಧಿಕಾದ ನಿರ್ವಹಿಸಿದ ಜೆಡಿಯು ನಾಯಕ ನಿತೀಶ್ ಕುಮಾರ್ , ಅವರು ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.
ಬಿಹಾರದಲ್ಲಿ ಬಿಜೆಪಿ-ಜೆಡಿಯು ಮೈತ್ರಿ ಸರ್ಕಾರ ಇರುವ ಹಿನ್ನೆಲೆಯಲ್ಲಿ ಉಪ ಮುಖ್ಯಮಂತ್ರಿಯಾಗಿದ್ದ ಸಮ್ರಾಟ್ ಚೌಧರಿ ಅವರನ್ನು ಮುಖ್ಯಮಂತ್ರಿಯಾಗಿ ಕಳೆದ ತಿಂಗಳು ಪ್ರಮಾಣ ವಚನ ಸ್ವೀಕಾರ ಮಾಡಿದ್ದರು

# ರಾಜನಾಳದಲ್ಲಿ ಆದಿನಾಥ ಮಂದಿರ ಸ್ಥಾಪನೆ: ಭಕ್ತಿಮಯ ನಾಥಷಷ್ಠಿ ಉತ್ಸವಕ್ಕೆ ಚಾಲನೆ

**ಬೀದರ್:ಮೇ.7:** ಇತ್ತಿಚೀಗೆ ತಾಲೂಕಿನ ರಾಜನಾಳ ಗ್ರಾಮದಲ್ಲಿ ನಾಥ ಸಂಸ್ಥಾನ ಔಸಾ (ಜಿಲ್ಲೆ ಲಾತೂರ್) ಪರಂಪರೆಯ ಆದಿನಾಥ ಮೂರ್ತಿ ಸ್ಥಾಪನೆ ಹಾಗೂ ನಾಥಷಷ್ಠಿ ಉತ್ಸವದ ಅಂಗವಾಗಿ ಭವ್ಯ ಧಾರ್ಮಿಕ ಕಾರ್ಯಕ್ರಮಗಳು ಭಕ್ತಿಭಾವದಿಂದ ನೆರವೇರಿದವು.
ನಾಥ ಸಂಸ್ಥಾನ ಔಸಾ ಪರಂಪರೆಯ ನಾಥಷಷ್ಠಿ ಉತ್ಸವವು ಸುಮಾರು 230 ವರ್ಷಗಳ ಇತಿಹಾಸ ಹೊಂದಿದ ಮಹತ್ವದ ಭಕ್ತಿ ಪರಂಪರೆಯಾಗಿದೆ. ಶ್ರೀವಿಠ್ಠಲನು ನಾಥಷಷ್ಠಿ ಉತ್ಸವದ ಪ್ರಸಾದವನ್ನು ಸದ್ಗುರು ವೀರನಾಥ ಮಹಾರಾಜ ಔಸೆಕರ ಅವರಿಗೆ ಅನುಗ್ರಹಿಸಿದ ಹಿನ್ನೆಲೆ, ಅವರ ವಂಶಸ್ಥರಿಂದಲೇ ಈ ಉತ್ಸವ ನಿರಂತರವಾಗಿ ಆಚರಿಸಲಾಗುತ್ತಿದೆ.



ಪ್ರತಿ ವರ್ಷದ ಉತ್ಸವಕ್ಕೆ ನಾಥ ಸಂಸ್ಥಾನದ ಪೀಠಾಧೀಶರಾದ ಸದ್ಗುರುಗಳು ಒಂದು ಗ್ರಾಮವನ್ನು ಆಯ್ಕೆ ಮಾಡುತ್ತಿದ್ದು, ಆ ಗ್ರಾಮದಲ್ಲಿರುವ ನಾಥ ಮಂದಿರದಲ್ಲಿ ಉತ್ಸವವನ್ನು ಆಚರಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ಇದನ್ನು "ಸಂಚಾರಿ ನಾಥಷಷ್ಠಿ ಉತ್ಸವ" ಎಂದೂ ಕರೆಯಲಾಗುತ್ತದೆ. ಉತ್ಸವ ನಡೆಯುವ ಗ್ರಾಮದಲ್ಲಿ ನಾಥ ಮಂದಿರ ಸ್ಥಾಪಿಸುವ ಸಂಪ್ರದಾಯವಿದ್ದು, ಇದುವರೆಗೆ ಮಹಾರಾಷ್ಟ್ರ, ಕರ್ನಾಟಕ, ಆಂಧ್ರ ಪ್ರದೇಶ, ತೆಲಂಗಾಣ ಹಾಗೂ ಉತ್ತರ ಪ್ರದೇಶಗಳಲ್ಲಿ ನೂರಾರು ನಾಥ ಮಂದಿರಗಳು ನಿರ್ಮಾಣಗೊಂಡಿವೆ.
2027ರಲ್ಲಿ ನಡೆಯಲಿರುವ 230ನೇ ನಾಥಷಷ್ಠಿ ಉತ್ಸವವನ್ನು ತಾಲೂಕಿನ ರಾಜನಾಳ ಗ್ರಾಮದಲ್ಲಿ ಆಯೋಜಿಸಲು ನಿರ್ಧರಿಸಲಾಗಿದೆ. ಈ ಪ್ರಯುಕ್ತ ಇತ್ತಿಚೀಗೆ ಗ್ರಾಮಸ್ಥರು ಹಾಗೂ ಔಸೆಕರ ಮಹಾರಾಜರ ಸಹಕಾರದಿಂದ ಹೊಸ ದೇವಾಲಯ ನಿರ್ಮಿಸಿ, ಆದಿನಾಥರ ಆಸನ, ಶ್ರೀವಿಠ್ಠಲ-ರುಕ್ಮಿಣಿ ಮೂರ್ತಿಗಳು, ಶಿವಲಿಂಗ ಹಾಗೂ ರಾಧಾಕೃಷ್ಣ ಮೂರ್ತಿಗಳ ಪ್ರಾಣ ಪ್ರತಿಷ್ಠೆ ನೆರವೇರಿಸಲಾಯಿತು.

ಈ ಅಂಗವಾಗಿ ಮೂರು ದಿನಗಳ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ವೈಶಾಖ ಪೌರ್ಣಿಮೆಯಾದ 2026ರ ಮೇ 1ರಂದು ಮುಖ್ಯ ಸಮಾರಂಭ ಭವ್ಯವಾಗಿ ಜರುಗಿತು. ಔಸಾದ ಬ್ರಹ್ಮವೃಂದವು ಪೂಜಾ ವಿಧಿಗಳನ್ನು ನೆರವೇರಿಸಿತು. ಸದ್ಗುರು ಗುರುಬಾಬಾ ಮಹಾರಾಜ, ಗೋರಖನಾಥ ಮಹಾರಾಜ, ಶ್ರೀರಂಗ ಮಹಾರಾಜ ಹಾಗೂ ಜ್ಞಾನರಾಜ ಮಹಾರಾಜ ಔಸೆಕರ ಅವರ ಸಾನ್ನಿಧ್ಯದಲ್ಲಿ ಪೂಜಾ ಕಾರ್ಯಗಳು ನಡೆದವು.
ಕಾರ್ಯಕ್ರಮಕ್ಕೆ ಮಾಜಿ ಕೇಂದ್ರ ಸಚಿವ ಭಗವಂತ ಖುಬಾ ಮುಖ್ಯ ಅತಿಥಿಯಾಗಿ ಆಗಮಿಸಿದ್ದರು. ಈ ಸಂದರ್ಭದಲ್ಲಿ ಔಸೆಕರ ಮಹಾರಾಜರು ಹಾಗೂ ರಾಜನಾಳ ಗ್ರಾಮಸ್ಥರು ಅವರ ಸನ್ಮಾನ ನೆರವೇರಿಸಿದರು.
ಶ್ರೀ ಸ್ವಾಮಿ ಮಹಾರಾಜ ಸಲಗರ್ಕರ್, ಜ್ಞಾನರಾಜ ಮಹಾರಾಜ ಔಸೆಕರ ಹಾಗೂ ಶ್ರೀರಂಗ ಮಹಾರಾಜ ಔಸೆಕರ ಅವರ ಕೀರ್ತನ ಸೇವೆಗಳು ಭಕ್ತರ ಮನಸೆಳೆಯುವಂತಿದ್ದವು. ವಿವಿಧ ರಾಜ್ಯಗಳಿಂದ ಆಗಮಿಸಿದ ಭಕ್ತರು ಹಾಗೂ ಗ್ರಾಮಸ್ಥರ ಭಾಗವಹಿಸುವಿಕೆಯಿಂದ ಉತ್ಸವ ಭಕ್ತಿಮಯ ವಾತಾವರಣದಲ್ಲಿ ಯಶಸ್ವಿಯಾಗಿ ನೆರವೇರಿತು.

# ಪ್ರತಿಭಾ ಪುರಸ್ಕಾರ ಕಾರ್ಯಕ್ರಮ



**ಬಂಕಾಪುರ್,ಮೇ.7:** ಪ್ರತಿ ವಿದ್ಯಾರ್ಥಿಗಳಲ್ಲಿ ವಿಶೇಷ ಪ್ರತಿಭೆ ಅಡಗಿದ್ದು ಅದನ್ನು ಗುರುತಿಸಿ ಮಾರ್ಗದರ್ಶನ ನೀಡುವ ಕಾರ್ಯ ಮುಖ್ಯವಾಗಿದೆ ಪೋಷಕರು ಮತ್ತು ಶಿಕ್ಷಕರ ಪಾತ್ರ ಮುಖ್ಯವಾಗಿದೆ. ಎಂದು ಸರ್ಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕ ಬಸವರಾಜ್ ಬಸರಿಕಟ್ಟಿ ಹೇಳಿದರು. ಪಟ್ಟಣದಲ್ಲಿ ಶಬರಿ ನಗರ ಮತ್ತು ವೈಷ್ಣವಿ ನಗರದ ಸಾರ್ವಜನಿಕರ ಸಹಯೋಗದಲ್ಲಿ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಗೆ ನಡೆದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಶಿಕ್ಷಕರ ವಿದ್ಯಾರ್ಥಿ ಮತ್ತು ಪಾಲಕರ ಪ್ರತಿಯೊಬ್ಬರ ಶ್ರಮ ಮುಖ್ಯವಾಗಿದೆ. ಈ ಮೂವರು ಶ್ರಮಿಸಿದಾಗ ವಿದ್ಯಾರ್ಥಿಗಳ ಭವಿಷ್ಯ ರೂಪಿಸಲು ಸಾಧ್ಯವಿದೆ ಎಂದರು. ಮುಖಂಡ ವಿರುಪಾಕ್ಷಪ್ಪ ಕಾಮನಹಳ್ಳಿ ಪ್ರಸ್ತಾವಿಕವಾಗಿ ಮಾತನಾಡಿದರು. ಸಿ ಟಿ ನೆಲೋಗಲ್, ಶಿವಲಿಂಗಪ್ಪ ಹುರಳಿ,ಯಶವಂತ ಗೌಡ ಪಾಟೀಲ್, ಮಲ್ಲಪ್ಪ ಚಿಕ್ಕಸಾಲಿ, ತಿಪ್ಪಣ್ಣ ಗೋಪಾಳರ , ಬಾಬಾ ಜಾನ್ ಶಿಗ್ಗಾವ್ , ಬಸನ್ ಗೌಡ ಅಗಸಿ ಮನೆ, ಪುಟ್ಟಪ್ಪ ಕಲ್ಯಾಣಿ, ಶೋಭಾ ಪಾಟೀಲ್, ಮಕ್ಕಳು ಮತ್ತು ಪಾಲಕರು ಉಪಸ್ಥಿತರಿದ್ದರು.

# ರೈತರು ಮತ್ತು ಕೃಷಿ ಕಾರ್ಮಿಕರ ಹಕ್ಕುಗಳಿಗಾಗಿ ಮುಖ್ಯಮಂತ್ರಿಗಳಿಗೆ ಮನವಿ; 43 ದಿನಗಳ ಧರಣಿ ಸತ್ಯಾಗ್ರಹದ ಬೇಡಿಕೆಗಳಿಗೆ ಒತ್ತಾಯ




**ಆಳಂದ:ಮೇ.7:** ಭಾರತೀಯ ಖೇತ್ ಮಜ್ದೂರ್ ಯೂನಿಯನ್ ಮತ್ತು ಕಿಸಾನ್ ಸಭಾ ಸಂಘಟನೆಗಳ ನೇತೃತ್ವದಲ್ಲಿ ಆಳಂದ ತಾಲೂಕು ಆಡಳಿತ ಸೌಧದ ಮುಂದೆ ಬೃಹತ್ ಪ್ರತಿಭಟನೆ ನಡೆಯಿತು. ರೈತರು ಮತ್ತು ಕೃಷಿ ಕೂಲಿ ಕಾರ್ಮಿಕರ ಪರವಾಗಿ ಹಮ್ಮಿಕೊಳ್ಳಲಾದ ನಿರಂತರ ಧರಣಿ ಸತ್ಯಾಗ್ರಹವು ಇಂದಿಗೆ 43 ದಿನಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ, ಪ್ರತಿಭಟನಾಕಾರರು ತಹಶೀಲ್ದಾರ್ ಶ್ರೀ ಅಣ್ಣಾರಾವ್ ಪಾಟೀಲ್ ಅವರ ಮೂಲಕ ರಾಜ್ಯದ ಮುಖ್ಯಮಂತ್ರಿಗಳಿಗೆ ತಮ್ಮ ಪ್ರಮುಖ ಬೇಡಿಕೆಗಳ ಮನವಿಯನ್ನು ಸಲ್ಲಿಸಿದರು.

ಪಟ್ಟಣದ ಪ್ರವಾಸಿ ಮಂದಿರದ ಮುಂದೆ ಕಿಸಾನ್ ಸಭಾ ಹಲವಾರು ರೈತ ಪರ ಬೇಡಿಕೆಗಳಿಗಾಗಿ ನಿರಂತರ ಧರಣಿ ನಡೆಸುತ್ತ ಬಂದಿದ್ದು, ಅದರ ಮಧ್ಯೆ ಇಂದು ತಾಲೂಕು ಕಚೇರಿ ಮುಂದೆ ಬಲವಾದ ಪ್ರತಿಭಟನೆ ನಡೆಸಿ ತಮ್ಮ ಬೇಡಿಕೆಗಳನ್ನು ಒತ್ತಾಯಿಸಲಾಯಿತು. ರೈತರು ಮತ್ತು ಕೃಷಿ ಕಾರ್ಮಿಕರು ಈ ಪ್ರತಿಭಟನೆಯಲ್ಲಿ ಭಾಗವಹಿಸಿದರು.

ಖಾಸಗಿ ಲೇವಾದೇವಿ: ಕ್ಯಾನ್ಸರ್ ಮತ್ತು ಎಚ್.ಐ.ವಿ.ಗಿಂತಲೂ ಭೀಕರ ಸಾಮಾಜಿಕ ಸಮಸ್ಯೆಯಾಗಿ ಇಂದಿನ ಪ್ರತಿಭಟನೆಯ 11 ಬೇಡಿಕೆಗಳ ಪೈಕಿ ಖಾಸಗಿ ಲೇವಾದೇವಿ ವಿಷಯವು ಅತ್ಯಂತ ಮಹತ್ವದ ಅಂಶವಾಗಿ ಮುನ್ನೆಲೆಗೆ ಬಂದಿದ್ದು, ಇದರ ಬಗ್ಗೆ ತಹಸೀಲ್ದಾರ ಅಣ್ಣಾರಾವ್ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ವಿಶೇಷ ಸಭೆ ನಡೆಸಲಾಯಿತು.

ಸಂಘಟನೆಯ ಮುಖಂಡರು ಮಾತನಾಡುತ್ತ, "ಖಾಸಗಿ ಲೇವಾದೇವಿ ವ್ಯವಹಾರಗಳು ಕ್ಯಾನ್ಸರ್ ಮತ್ತು ಎಚ್.ಐ.ವಿ.ಗಿಂತಲೂ ಹೆಚ್ಚು ಭೀಕರವಾದ ಸಾಮಾಜಿಕ ಮತ್ತು ಆರ್ಥಿಕ ಸಮಸ್ಯೆಗಳನ್ನು ಸೃಷ್ಟಿಸಿವೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.

ಆಳಂದ ತಾಲೂಕಿನಲ್ಲಿ ನೋಂದಾಯಿತ ಮತ್ತು ನೋಂದಾಯಿಸದ ಲೇವಾದೇವಿ ಸಂಸ್ಥೆಗಳ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದು, ಲೇವಾದೇವಿ ಮಾಡುತ್ತಿರುವ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಕಿಸಾನಸಭಾ ರಾಜ್ಯ ಕಾರ್ಯಾಧ್ಯಕ್ಷ ಮೌಲಾ ಮುಲ್ಲಾ ಅವರು ಒತ್ತಾಯಿಸಿದರು. ಭೂರಹಿತ ಕೃಷಿ ಕೂಲಿ ಕಾರ್ಮಿಕರಿಗೆ ಸ್ವಯಂ ಉದ್ಯೋಗ ಮತ್ತು ಆಶ್ರಯ ಒದಗಿಸುವಂತೆ ಆಗ್ರಹಿಸಿದರು.

ಭೂರಹಿತ ಕೃಷಿ ಕೂಲಿ ಕಾರ್ಮಿಕರು ಭೂರಹಿತ ನಿರುದ್ಯೋಗಿಗಳಾಗಿದ್ದು, ಅವರಿಗೆ ಸ್ವಯಂ ಉದ್ಯೋಗ ನಿರ್ಮಿಸಿಕೊಡಲು ಸರ್ಕಾರ ತ್ವರಿತ ಕ್ರಮ ತೆಗೆದುಕೊಳ್ಳಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು. ಅದರಲ್ಲಿ ಮುಖ್ಯವಾಗಿ: ಹೈನುಗಾರಿಕೆ, ಕುರಿ ಮತ್ತು ಕೋಳಿ ಸಾಕಾಣಿಕೆ ಘಟಕ ಸ್ಥಾಪನೆಗೆ ಸರ್ಕಾರಿ ಬ್ಯಾಂಕ್‌ಗಳಿಂದ ರಿಯಾಯಿತಿ ದರದಲ್ಲಿ ಆರ್ಥಿಕ ನೆರವು ನೀಡಬೇಕು. ಅಗತ್ಯ ಇರುವವರಿಗೆ ಸರ್ಕಾರಿ ಗ್ಯಾರಂಟಿ ಜಾಗದಲ್ಲಿ ನಿವೇಶನ ಮತ್ತು ಮನೆ ನಿರ್ಮಿಸಿ ಕೊಡಬೇಕು. ಕೃಷಿಗೆ ನೀರು ಮತ್ತು ಕುಡಿಯುವ ನೀರಿಗಾಗಿ ಅಂತರ್ ಅಂತರ್ಜಲ ಯೋಜನೆ ಅನುಷ್ಠಾನ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕೃಷಿ ಮತ್ತು ಕುಡಿಯುವ ನೀರಿಗಾಗಿ ಹಣಮಂತರಾವ್ ಸಮಿತಿಯ ಮಾರ್ಗದರ್ಶನದ ಪ್ರಕಾರ ತಾಲೂಕಿನಾದ್ಯಂತ ಅಂತರ್ ಅಂತರ್ಜಲ ಸಂಪರ್ಕ ಯೋಜನೆ ಕೈಗೊಳ್ಳಬೇಕು. ಈ ಯೋಜನೆ ಅನುಷ್ಠಾನದಿಂದ ಕೃಷಿ ನೀರಾವರಿ, ಕುಡಿಯುವ ನೀರಿನ ಸಮಸ್ಯೆ ಮತ್ತು ನಿರುದ್ಯೋಗ ಮೂರು ಸಮಸ್ಯೆಗಳನ್ನು ಒಂದೇ ಬಾರಿ ನಿವಾರಿಸಲು ಸಾಧ್ಯ ಎಂದು ಮುಖಂಡರು ಜೊತೆಗೆ ಈ ಕಾಮಗಾರಿಯನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ಮನರೇಗಾ) ಅಡಿಯಲ್ಲಿ ನಿರಂತರವಾಗಿ ನಡೆಸಿಕೊಂಡು ಹೋಗಬೇಕೆಂದು ಪ್ರತಿಭಟನೆಯಲ್ಲಿ ಭಾಗವಹಿಸಿದ ಕಿಸಾನ್ ಸಭಾ ರಾಜ್ಯ ಕಾರ್ಯಾಧ್ಯಕ್ಷ ಮೌಲಾ ಮುಲ್ಲಾ, ತಾಲೂಕಾಧ್ಯಕ್ಷ ಧರ್ಮಣ್ಣ ಪೂಜಾರಿ, ಉಪಾಧ್ಯಕ್ಷ ಮಹಾದೇವ ಮಂಟಗಿ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮೈಲಾರಿ ಜೋಗೆ, ನ್ಯಾಯವಾದಿ ಪಂಡಿತ್ ಸಲ್ಗರ್, ಕಮಲೇಶ ಅವಟೆ, ಮಹಾದೇವ ಜಿಡ್ಡೆ, ಕಬೀರಾ ಬೇಗಂ, ರಮೇಶ ಹಾತ್ತಿಗಳೆ, ಅಶ್ರಫ್ ಮುಲ್ಲಾ, ಬಾಷಾ ಯಳಸಂಗಿ, ರತನಲಾಲ ಕಲಶೆಟ್ಟಿ, ಶರಣಗೌಡ ಪಾಟೀಲ ಸೇರಿದಂತೆ ಹಲವಾರು ಮುಖಂಡರು ಮತ್ತು ಕಾರ್ಯಕರ್ತರು ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ತಹಸೀಲ್ದಾರ ಅಣ್ಣಾರಾವ್ ಪಾಟೀಲ ಅವರು ಈ ಕುರಿತು ಸಂಬಂಧಿತ ಅಧಿಕಾರಿಗಳ ಗಮನಕ್ಕೆ ತಂದು ಬೇಡಿಕೆ ಈಡೇರಿಸಲಾಗುವುದು ಸರ್ಕಾರ ಮಟ್ಟದ ಬೇಡಿಕೆಗೆ ಮೇಲಾಧಿಕಾರಿಗಳ ಮೂಲಕ ಕಳುಹಿಸಿಕೊಡಲಾಗುವುದು ಎಂದು ಭರವಸೆ ನೀಡಿದ ಮೇಲೆ ಪ್ರತಿಭಟನೆ ಹಿಂದಕ್ಕೆ ಪಡೆಯಲಾಯಿತು.

# ಸಾರ್ವಜನಿಕರಿಗೆ ಸರಿಯಾಗಿ ಗ್ಯಾಸ್ ಸಿಲಿಂಡರ್ ವಿತರಣೆಗೆ ಸೂಚನೆಎರಡು ಮಾಹೆಯ ಪಡಿತರ ಆಹಾರ ಧಾನ್ಯ ವಿತರಣೆಗೆ ಕ್ರಮ:ಜಿಲ್ಲಾಧಿಕಾರಿ ಹರ್ಷಲ್ ಭೋಯರ್



**ಯಾದಗಿರಿ: ಮೇ.7:**ಗ್ಯಾಸ್ ಏಜೇನ್ಸಿಯವರು ಸಾರ್ವಜನಿಕರಿಗೆ ಸರಿಯಾಗಿ ಗೃಹಬಳಕೆ ಗ್ಯಾಸ್ ಸಿಲಿಂಡರ್ ನನ್ನು ಸರಿಯಾಗಿ ಸರಬರಾಜು ಮಾಡಲು ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಸೂಚಿಸಿದರು .

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗ್ಯಾಸ್ ಏಜೆನ್ಸಿದಾರರೊಂದಿಗೆ ಸಭೆ ನಡೆಸಿದ ಅವರು, ಅನಧಿಕೃತವಾಗಿ ಮಾರಾಟ , ದರ ಹೆಚ್ಚಳ ಮಾಡಿ ಗ್ಯಾಸ್ ಸಿಲಿಂಡರ್‌ಮಾರಾಟ ಮಾಡಿದರೆ ಅಗತ್ಯ ವಸ್ತುಗಳ ಕಾಯಿದೆ 1955 ಮತ್ತು ಪೆಟ್ರೋಲಿಯಂ ವಸ್ತುಗಳ ಸಂಗ್ರಹ, ಬಳಕೆ ಕಾಯಿದೆ 1999 ಅಡಿ ಕರ್ಮವಹಿಸಲಾಗುವುದು ಎಂದು ಎಚ್ಚರಿಕೆ ನೀಡಿದರು , ಆಹಾರ ಇಲಾಖೆ ಉಪನಿರ್ದೇಶಕರಾದ ಸೋಮಶೇಖರ ಬಿರಾದಾರ , ಎಲ್ಲಾ 18 ಏಜೇನ್ಸಿಯವರು ಆಹಾರ ಇಲಾಖೆ ತಾಲೂಕಾ ಮಟ್ಟದ ಸಿಬ್ಬಂದಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.ಎರಡು ಮಾಹೆಗಳ ಆಹಾರ ಧಾನ್ಯ ವಿತರಣೆಗೆ ಕ್ರಮ ಪಡಿತರ ಚೀಟಿದಾರರ ಗಮನಕ್ಕೆ

ಕೇಂದ್ರ ಸರ್ಕಾರವು ದೇಶದಲ್ಲಿ ಮುಂಬರುವ ಖರೀದಿ ಋತುವಿನ ಹಿನ್ನಲೆಯಲ್ಲಿ ಮತ್ತು ಪರಿಣಾಮಕಾರಿ ಲಾಜಿಸ್ಟಿಕ್ಸ್ ಮತ್ತು ಸಂಗ್ರಹಣೆಗಾಗಿ ರಾಜ್ಯಗಳು ಎದುರಿಸುತ್ತಿರುವ ಅಡಚಣೆಗಳಿಂದಾಗಿ ಎನ್‌ಎಫ್‌ಎಸ್ ಅಡಿಯಲ್ಲಿ ಮೇ ಮತ್ತು ಜೂನ್–2026 ರ ಎರಡು ಮಾಹೆಗಳ ವರೆಗಿನ ಆಹಾರಧಾನ್ಯ ಹಂಚಿಕೆಯನ್ನು ಮುಂಗಡವಾಗಿ ಎತ್ತುವಳಿ ಮಾಡಿ ಕೂಡಲೇ ವಿತರಣೆ ಮಾಡುವಂತೆ ರಾಜ್ಯಗಳಿಗೆ ಸೂಚಿಸಲಾಗಿರುತ್ತದೆ.

ಪ್ರಯುಕ್ತ ಮೇ–2026 ಮತ್ತು ಜೂನ್–2026 ರ ಎರಡು ಮಾಹೆಗಳ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ (ಎನ್‌ಎಫ್‌ಎಸ್‌ಎ) ಹಂಚಿಕೆಯನ್ನು ಮೇ–2026ರ ಮಾಹೆಯಲ್ಲಿ ವಿತರಿಸಲು ಸರ್ಕಾರವು ನಿರ್ದೇಶನ ನೀಡಿದೆ.

ಪ್ರಯುಕ್ತ ಯಾದಗಿರಿ ಜಿಲ್ಲೆಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 70 ಕೆ.ಜಿ (ಮೇ–35 + ಜೂನ್ –35) ಅಕ್ಕಿ ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 10 ಕೆ.ಜಿ (ಮೇ– 5 + ಜೂನ್–5) ಉಚಿತವಾಗಿ ವಿತರಿಸಲಾಗುತ್ತದೆ.

ಮೇ ಮತ್ತು ಜೂನ್ 2026 ರ ಎರಡು ಮಾಹೆಗಳ ಆಹಾರಧಾನ್ಯವನ್ನು ಒಟ್ಟಿಗೆ ವಿತರಣೆ ಮಾಡಬೇಕಾಗಿರುವುದರಿಂದ ವಿತರಣಾ ಸಂದರ್ಭದಲ್ಲಿ ಪ್ರತಿ ಮಾಹೆಯ ವಿತರಣೆಗೆ ಫಲಾನುಭವಿಗಳಿಂದ ಪ್ರತ್ಯೇಕ ಬಯೋ ಮೆಟ್ರಿಕ್ ಪಡೆಯುವ ಅವಕಾಶ ಕಲ್ಪಿಸಲಾಗಿರುತ್ತದೆ.ಆದ್ದರಿಂದ ಪಡಿತರ ಚೀಟಿ ಫಲಾನುಭವಿಗಳು ಎರಡು ಬಾರಿ ಬಯೋ ಮೆಟ್ರಿಕ್ ನೀಡಿ ಆಹಾರಧಾನ್ಯವನ್ನು ಪಡೆಯಲು ಜಿಲ್ಲೆಯ ಎಲ್ಲಾ ಪಡಿತರ ಚೀಟಿದಾರರಿಗೆ ತಿಳಿಯಪಡಿಸಿದೆ.

ಮುಂದುವರೆದು ರಾಜ್ಯ ಸರ್ಕಾರದ ಮಹತ್ವ ಯೋಜನೆಯಾದ ಅನ್ನಭಾಗ್ಯ ಯೋಜನೆಯಡಿ ರಾಜ್ಯ ಸರ್ಕಾರದ ವತಿಯಿಂದ ವಿತರಿಸಲಾಗುತ್ತಿರುವ ಹೆಚ್ಚುವರಿ 05 ಕೆ.ಜಿ ಆಹಾರಧಾನ್ಯವನ್ನು ಮೇ ಮತ್ತು ಜೂನ್–2026 ರ ಮಾಹೆಗಳ ಆಹಾರಧಾನ್ಯವನ್ನು ಆದ್ಯತಾ ಮತ್ತು ಅಂತ್ಯೋದಯ ಪಡಿತರ ಚೀಟಿಯ ಫಲಾನುಭವಿಗಳಿಗೆ ಈಗಾಗಲೇ ವಿತರಿಸುವ ರೀತಿಯಲ್ಲಿ ಜೂನ್–2026 ರ ಮಾಹೆಯಲ್ಲಿ ಎತ್ತುವಳಿ ಮಾಡಿ ವಿತರಿಸಲು ಸರ್ಕಾರವು
ನಿರ್ದೇಶಿಸಿದೆ.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ ಅಂತ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ಸಹಾಯವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪ ನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಸದರಿ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ

# ಮೇ.9 ರಿಂದ ಹಜರತ್ ಚಿತ್ತಾಷಹಾವಲಿ ದರ್ಗಾದ 799ನೇ ಜಾತ್ರಾ ಮಹೋತ್ಸವ ಪ್ರಾರಂಭ



**ಚಿತ್ತಾಪುರ;ಮೇ.7:** ಪಟ್ಟಣದ ಐತಿಹಾಸಿಕ ಹಿಂದೂ–ಮುಸ್ಲಿಂ ಭಾವೈಕ್ಯತೆಯ ಸೂಫಿ ಸಂತ ಹಜರತ್ ಚಿತ್ತಾಷಹಾವಲಿ ದರ್ಗಾದ 799 ನೇ ಜಾತ್ರಾ ಮಹೋತ್ಸವ ಮೇ.9 ರಿಂದ ಪ್ರಾರಂಭವಾಗಲಿದೆ ಎಂದು ದರ್ಗಾದ ಮುತ್ತುವಲ್ಲಿ ಸೈಯದ್ ಮಿನಾಜುದ್ದೀನ್ ಚಿಸ್ತಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಮೇ.9 ರಂದು ಶನಿವಾರ ಮುಂಜಾನೆ 10 ಘಂಟೆಗೆ ಪಟ್ಟಣದ ಹಿಂದೂ ಧರ್ಮದ ನಾಗಣ್ಣ ಮಾಸ್ಟರ್ ಬಳ್ಳಾ ಅವರ ಮನೆಯಲ್ಲಿ ಗಲಾಫ್ ಫಾತೇಹಾ ಜರುಗುವ ಮೂಲಕ ಶುಭಾರಂಭಗೊಳ್ಳುವುದು. ಇದರಲ್ಲಿ ಸರ್ವಧರ್ಮೀಯರು, ಗಣ್ಯವ್ಯಕ್ತಿಗಳು ಮೌಲ್ವಿಗಳು, ಜಂಗಮರು ಸೇರಿದಂತೆ ಅನೇಕರು ಭಾಗವಹಿಸಲಿದ್ದಾರೆ.

ಅಪರಾಹ್ನ ಸೂಫಿ ಸಂತರ ಭಕ್ತರಾದ ಚೂರಿ, ಬಾಬುಳಗಿ, ಪಬ್ಬಣಿ, ವಸ್ತ್ರದ ಮನೆಯವರಿಂದ ವಿವಿಧ ಧಾನ್ಯಗಳನ್ನು ಜೋಳಿಗೆಯಲ್ಲಿ ತಂದು ಪೂಜೆ ಸಲ್ಲಿಸಿ ಚಿತ್ತಾಷಹಾವಲಿ ಕುಳಿತ ಸ್ಥಳಕ್ಕೆ ಮತ್ತು ಗಲಾಫ್ ಗೆ ಪ್ರಾರ್ಥನೆ ಸಲ್ಲಿಸಿ, ನಂತರ ಮಾಲದಿ ಪ್ರಸಾದ ವಿತರಣೆ ನಡೆಯಲಿದೆ.

ರಾತ್ರಿ 9.30 ಘಂಟೆಗೆ ಬಳ್ಳಾ ಅವರ ಮನೆಯಿಂದ ಗಲಾಫ್ ಮೆರವಣಿಗೆಯು ಹೊರಟು ದರ್ಗಾದ ಮುತ್ತುವಲ್ಲಿ ಮತ್ತು ಸಜ್ಜಾದ ಸೈಯದ್ ಮಿನಾಜುದ್ದೀನ್ ಚಿಸ್ತಿ ಅವರ ಮನೆಗೆ ತಲುಪುವುದು. ಅಲ್ಲಿಂದ ರಾತ್ರಿ 10 ಘಂಟೆಗೆ ಸಂದಲ್ ಷರೀಫ್ ಫಾತೇಹಾ ಮೂಲಕ ಸಂದಲ್ (ಗಂಧ) ಮೆರವಣಿಗೆಯು ಚಾಲನೆಗೊಳ್ಳುವುದು. ಸಂದಲ್ ಹೊರಟ ಮೇಲೇನೆ ಬಹಳಷ್ಟು ಭಕ್ತಾದಿಗಳು ತಮ್ಮ ಉಪವಾಸ ಬಿಡುವರು.

ಸಂದಲ್ ಮೆರವಣಿಗೆಯಲ್ಲಿ ಗಲಾಫ್ ಹೊತ್ತ ಕುದರೆ, ದರ್ಗಾಕ್ಕೆ ಹೊದಿಸುವ ಚಾಂದನಿ ಹೊತ್ತ ಒಂಟೆಗಳು, ಶೆಹನಾಯಿ ಮತ್ತು ನಗಾರಿ ವಾದಕರು, ಮೌಲ್ವಿಗಳ ಭಕ್ತಿಗಾಯನ ಡಬಲಿ ಬಾರಿಸುತ್ತ, ವಿವಿಧ ವಾದ್ಯಗಳು, ಯುವಕರ ಸಾಹಸಮಯ ಮಲ್ಲಗಂಭ, ನಾನಾ ಬಡಾವಣೆಗಳಿಂದ ಆಗಮಿಸಿ ತಮ್ಮ ತಮ್ಮ ತಂಡದ ಪರವಾಗಿ ಸಮಾನ ರಂಗಿನ ಧಿರಿಸು ಧರಿಸಿ ಫೆರಪಟ್ಟಿ ಆಡುವುದು ಮುಂತಾದ ಆಕರ್ಷಣೆಗಳು ಇರುತ್ತವೆ.

ಸಂದಲ್ ಹೊರಡುವ ಮಾರ್ಗದುದ್ದಕ್ಕೂ ರಸ್ತೆಯ ಇಕ್ಕೆಲಗಳಲ್ಲಿ ಕಾಯಿದು ಕೂಡುವುದು, ಅಂಗಡಿಗಳ ಮೇಲೆ ಜಗಮಗಿಸುವ ವಿದ್ಯುತ್ ಅಲಂಕಾರ, ಚಿಕ್ಕವರು ದೊಡ್ಡವರೆನ್ನದೆ, ಮಹಿಳೆಯರು ಕೂಡ ಸಂದಲ್ ಮೆರವಣಿಗೆಯ ದರ್ಶನ ಮಾಡುವರು.

ಗಂಧದ ಮೆರವಣಿಗೆಯು ಭುವನೇಶ್ವರಿ ವೃತ್ತ, ಜನತಾ ವೃತ್ತ, ಕಪ್ಪಡ ಬಜಾರ್, ಚಿತ್ತಾವಲಿ ವೃತ್ತ, ಬಾಹರಪೇಟ್ ಮುಖಾಂತರ ಮಾರನೇ ದಿನ ನಸುಕಿನ ಜಾವ 5ರ ಸಮಯಕ್ಕೆ ದರ್ಗಾ ತಲುಪಲಿದೆ ಮತ್ತು ಅಲ್ಲಿ ಗುರುಗಳಾದ ಪೀರಖಾದರಿ ಸಮಾಧಿಗೆ ಹಾಗೂ ಸೂಫಿ ಸಂತ ಹಜರತ್ ಚಿತ್ತಾಷಹಾವಲಿ ಸಮಾಧಿಗೆ ಹೂವುಗಳ ಸುರಿಮಳೆಯಲ್ಲಿ ಗಂಧಲೇಪನ ಮತ್ತು ಗಲಾಫ್ ಹೊದಿಕೆ, ಫಾತೇಹಾ ಮೂಲಕ ಅರ್ಪಣೆಗೊಳ್ಳುವುದು, ನಂತರ ಚಾಜದ ರೂಪದಲ್ಲಿ ಮುತ್ತುವಲ್ಲಿ ಅವರಿಗೆ, ಗಂಧ ಹೊತ್ತವರು, ದರ್ಗಾದ ಪೂಜಾರಿಗಳು, ಮುಜಾವರಗಳು, ಕುದರೆ ಸೇವೆ ಮಾಡುವವರು, ಮೌಲಾನಗಳಿಗೆ, ಖಾಜಿಸಾಹೇಬ ಅವರುಗಳಿಗೆ ಪ್ರಸಾದ ರೂಪದಲ್ಲಿ ಬಹು ಪಾವಿತ್ರತೆವುಳ್ಳ ತಬರುಕ್ ವಿತರಿಸಲಾಗುವುದು. ಗಂಧಲೇಪನ ನಡೆದ ನಂತರ ಭಕ್ತರು ಸೂಫಿ ಸಂತರಿಗೆ ಪ್ರಿಯವಾದ ಮಾಲದಿ, ಹೂವು, ತೆಂಗಿನಕಾಯಿ, ಅರ್ಪಿಸುವರು.

ದರ್ಗಾ ಆವರಣದಲ್ಲಿ ರಾತ್ರಿ ಮಿರಾಮ್ (ಮಾಡಗಳಲ್ಲಿ) ಸಾವಿರಾರು ದೀಪಗಳು ಪ್ರಜ್ವಲಿಸತ್ತವೆ, ಭಕ್ತರು ಹರಕೆಯನುಸಾರ ದೀಪ ಬೆಳಗಿಸುವರು, ನೋಡುಗರ ನಯನಕ್ಕೆ ಸೆಳೆತ ಹೃದಯಕ್ಕೆ ಅನುಭೂತಿ ನೀಡುವುದು, ನಂತರ 10 ಘಂಟೆಗೆ ಖ್ಯಾತ ಕಲಾವಿದರಿಂದ ಖವ್ವಾಲಿ ಮತ್ತು ಗೀ ಗೀ ಪದಗಳು ನಡೆಯುವವು. ಮೂರನೇ ದಿನ ರಾತ್ರಿ 10 ಗಂಟೆಗೆ ಖ್ಯಾತ ಕಲಾವಿದರಿಂದ ಖವ್ವಾಲಿ ಮತ್ತು ಗೀ ಗೀ ಪದಗಳು ನಡೆಯುವವು. ಭಕ್ತಾದಿಗಳು ಉತ್ಸಾಹದಿಂದ ಭಾಗವಹಿಸುತ್ತಾರೆ.

ಮಕ್ಕಳ ಮನೋರಂಜನೆಗಾಗಿ ವಿವಿಧ ಆಟಿಕೆಗಳ ಅಂಗಡಿ, ಎತ್ತರದ ಜೋಕಾಲಿಗಳು, ಅಜಮೀರಿನ ಸಿಹಿಯಾದ ಭಕ್ಷ್ಯಗಳು, ರಾಜಸ್ತಾನಿಯವರ ಕರಕುಶಲತೆಯ ಮಳಿಗೆಗಳು, ದೆಹಲಿಯ ಪಿಂಗಾಣಿ ಸಾಮಗ್ರಿಗಳು, ಅಜಮೀರಿನ ರಾಶಿಫಲದ ಹರಳುಗಳು, ಮಹಿಳೆಯರಿಗಾಗಿ ಬಣಬಣ್ಣದ ಬಳೆಗಳ ಅಂಗಡಿಗಳು, ಸೌಂದರ್ಯ ಸಾಧನದ ಅಂಗಡಿಗಳು, ಫಲಹಾರದ ಟೆಂಟ್, ಅಂಗಡಿಗಳು, ಯುವಕರಿಗಾಗಿ ಬ್ರೇಕ್ ಡಾನ್ಸ್ ತೊಟ್ಟಿಲು, ಪಟ್ಟಣದ ಬೆಲ್ಲದ ಜಿಲೇಬಿ ಮುಂತಾದವುಗಳು ಮನ ಸೂರೆಗೊಳಿಸುವವು. ಮೂರು ದಿನಗಳವರೆಗೆ ನಡೆಯುವ ಜಾತ್ರೆಯಲ್ಲಿ ಪಟ್ಟಣ ಸೇರಿದಂತೆ ವಿವಿಧ ಹಳ್ಳಿಗಳಿಂದ ಮತ್ತು ನೆರೆಯ ತೆಲಂಗಾಣ, ಆಂಧ್ರಪ್ರದೇಶ, ಮಹಾರಾಷ್ಟ್ರ ರಾಜ್ಯಗಳಿಂದ ಸಾವಿರಾರು ಭಕ್ತರು ಭಾಗವಹಿಸುವರು ಎಂದು ದರ್ಗಾದ ಮುತ್ತುವಲ್ಲಿ ಮಿನಾಜುದ್ದೀನ್ ಚಿಸ್ತಿ ತಿಳಿಸಿದ್ದಾರೆ.

# ಮೌಲಾನಾ ತೌಸಿಫ್ ರಜಾ ಹತ್ಯೆ ಪ್ರಕರಣನ್ಯಾಯಕ್ಕಾಗಿ ಆಳಂದ್‌ನಲ್ಲಿ ತೀವ್ರ ಪ್ರತಿಭಟನೆ, ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಕೆ



**ಆಳಂದ:ಮೇ.7:** ಉತ್ತರ ಪ್ರದೇಶದ ಬರೇಲಿಯಲ್ಲಿ ಚಲಿಸುವ ರೈಲಿನಿಂದ ಎಸೆದು ಹತ್ಯೆ ಮಾಡಲಾಗಿದೆ ಎನ್ನಲಾದ ಮದರಸಾ ಶಿಕ್ಷಕ ಮೌಲಾನಾ ತೌಸಿಫ್ ರಜಾ ಮರ್ಹಾರಿ ಅವರ ಪ್ರಕರಣದಲ್ಲಿ ನ್ಯಾಯ ಒದಗಿಸಬೇಕೆಂದು ಒತ್ತಾಯಿಸಿ, ತಾಲೂಕ ಆಡಳಿತ ಸೌಧದ ಮುಂದೆ ಸುನಿ ಉಲ್ಮಾ ಈ ಕೌನ್ಸಿಲ್ ಸಂಘಟನೆಯ ಆಶ್ರಯದಲ್ಲಿ ಪ್ರತಿಭಟನೆ ನಡೆಯಿತು.

ಪ್ರತಿಭಟನಾಕಾರರು ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಹೆಸರಿಗೆ ಸಂಬೋಧಿಸಿದ ಮನವಿಪತ್ರವನ್ನು ತಹಶೀಲ್ದಾರ್ ಅಣ್ಣಾರಾವ್ ಪಾಟೀಲ್ ಅವರ ಮೂಲಕ ನ್ಯಾಯ ಒದಗಿಸುವಂತೆ ಸಲ್ಲಿಸಿದರು.

ಬಿಹಾರದ ಕಿಶನ್‌ಗಂಜ್‌ನ ಮದರಸಾ ಶಿಕ್ಷಕ ಮತ್ತು ಇಮಾಮ್ ಆಗಿದ್ದ ಮೌಲಾನಾ ತೌಸಿಫ್ ರಜಾ ಮರ್ಹಾರಿ ಅವರ ಶವ ಏಪ್ರಿಲ್ 26, 2026 ರಂದು ಉತ್ತರ ಪ್ರದೇಶದ ಬರೇಲಿ ರೈಲು ನಿಲ್ದಾಣದ ಬಳಿ ರೈಲು ಹಳಿಗಳ ಮೇಲೆ ಪತ್ತೆಯಾಯಿತು. ಸ್ಥಳೀಯ ಪೊಲೀಸರು ಇದನ್ನು ಆಕಸ್ಮಿಕ ಘಟನೆ ಎಂದು ಹೇಳಿದ್ದರೂ, ಮೃತರ ಕುಟುಂಬ ಇದನ್ನು ತೀವ್ರವಾಗಿ ಅಲ್ಲಗಳೆದಿದೆ. ಮೃತರು ಕೊನೆಯ ಬಾರಿ ದೂರವಾಣಿ ಕರೆ ಮಾಡಿದಾಗ ತಮ್ಮ ಮೇಲೆ ಅಪರಿಚಿತರು ಗುಂಪು ಹಲ್ಲೆ ನಡೆಸುತ್ತಿದ್ದಾರೆ ಎಂದು ಭಯಭೀತರಾಗಿ ತಿಳಿಸಿದ್ದಾರೆ ಎಂದು ಕುಟುಂಬದವರು ಹೇಳಿದ್ದಾರೆ. ಚಲಿಸುವ ರೈಲಿನಿಂದ ಉದ್ದೇಶಪೂರ್ವಕವಾಗಿ ಎಸೆದು ಹತ್ಯೆ ಮಾಡಲಾಗಿದೆ ಎಂಬುದು ಕುಟುಂಬದ ಗಂಭೀರ ಆರೋಪವಾಗಿದೆ ಎಂದು ಮುಖಂಡರು ಹೇಳಿದರು.

ಪ್ರಕರಣದ ಸ್ವತಂತ್ರ ಮತ್ತು ನಿಷ್ಪಕ್ಷಪಾತ ತನಿಖೆ ನಡೆಸಬೇಕು. ದೋಷಿಗಳನ್ನು ಬಂಧಿಸಿ ಕಠಿಣ ಶಿಕ್ಷೆ ವಿಧಿಸಬೇಕು. ಮೃತರ ಕುಟುಂಬಕ್ಕೆ 50ಲಕ್ಷ ರೂಪಾಯಿ ಸೂಕ್ತ ಪರಿಹಾರ ಮತ್ತು ರಕ್ಷಣೆ ನೀಡಬೇಕು. ದೇಶದಲ್ಲಿ ಕೋಮು ಸಾಮರಸ್ಯ ಕಾಪಾಡಲು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಘಟನೆ ಇಡೀ ದೇಶದ ನಾಗರಿಕರಲ್ಲಿ ಭಯ ಮತ್ತು ಆತಂಕ ಮೂಡಿಸಿದೆ. ಇಂತಹ ಘಟನೆಗಳು ನಡೆಯುತ್ತಲೇ ಇದ್ದರೆ ದೇಶದ ಕೋಮು ಸಾಮರಸ್ಯಕ್ಕೆ ಧಕ್ಕೆ ಬರಲಿದೆ. ರಾಷ್ಟ್ರಪತಿಗಳು ಸ್ವತಃ ಮಧ್ಯಪ್ರವೇಶಿಸಿ ತ್ವರಿತ ನ್ಯಾಯ ದೊರಕಿಸಿಕೊಡಬೇಕೆಂದು ಸಂಘಟನೆಯ ನಾಯಕರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮುಸ್ಲಿಂ ಧಾರ್ಮಿಕ ಮುಖಂಡರು ಸೇರಿದಂತೆ ಅಬ್ದುಲ್ ಸಲಾಂ ಸಗರಿ, ಭಾಕರ್‌ಅಲಿ ಜಮಾದಾರ, ಮೌಲಾ ಮುಲ್ಲಾ ಸೇರಿದಂತೆ ಸಮುದಾಯ ಅನೇಕರು ಭಾಗವಹಿಸಿದ್ದರು.

# ಹೊರಟೂರ ಗ್ರಾಮದ ಸರಕಾರಿ ಶಾಲೆ, ಪೀರಸಾಬ ದರ್ಗಾಕ್ಕೆ ಮೂಲಭೂತ ಸೌಕರ್ಯ ಒದಗಿಸಿ



**ಯಾದಗಿರಿ:ಮೇ.7:** ಜಿಲ್ಲೆಯ ವಡಗೇರಾ ತಾಲೂಕಿನ ಯಾದಗಿರಿ ಮತಕ್ಷೇತ್ರಕ್ಕೆ ವ್ಯಾಪ್ತಿಗೆ ಬರುವ ಹೊರಟುರ ಗ್ರಾಮದ ಪ್ರಮುಖರು ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳವರ ಗಮನಕ್ಕೆ ತಂದ ಹಿನ್ನಲೆಯಲ್ಲಿ ತಕ್ಷಣ ಉಮೇಶ ಮುದ್ನಾಳ ಅವರು ಹೊರುಟುರ ಗ್ರಾಮದ ಪೀರಸಾಬ ದರ್ಗಾ ಮತ್ತು ಸರಕಾರಿ ಕಿರಿಯ ಪ್ರಾಥಮಿಕ ಶಾಲೆಗೇ ಬೇಟಿ ನೀಡಿ ಎಲ್ಲಾ ಕಡೆ ಕಾಲ್ನಡಿಗೆಯಿಂದ ಸಂಚಾರ ಮಾಡಿ ಪರಿಶಿಲಿಸಿದ ನಂತರ ಮಾತನಾಡಿ ಅವರು ಪೀರಸಾಬ ದರ್ಗಾದಲ್ಲಿ ಪ್ರತಿ ವರ್ಷ ಜಾತ್ರೆ ಮಹೋತ್ಸವ ನಡೆಯುತ್ತಿದ್ದು ಈ ಗ್ರಾಮದ ಪ್ರಾಥಮಿಕ ಶಾಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳಿದ್ದು ಅವರಿಗೆ ಮತ್ತು ದರ್ಗಾಕ್ಕೆ ಮೂಲ್ಯ ಸೌಯರ್ಕಗಳಾದ ಕುಡಿಯುವನೀರು, ವಿದ್ಯುತ್ತ, ಸಿಸಿ ರಸ್ತೆ, ಇವು ಪ್ರಮುಖ ಬೇಡಿಕೆಯಾಗಿದ್ದು ಇವುಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಗಮಕ್ಕೆ ತಂದು ಸಮಸ್ಯೆ ಸರಿಪಡಿಸುವುದಾಗಿ ಭರವಸೆ ನೀಡಿದರು. ಹೊರಟೂರ ಗ್ರಾಮಕ್ಕೆ ಜಿಲ್ಲಾಡಳಿತ ಪೀರಸಾಬ ದರ್ಗಾ ಮತ್ತು ಸರಕಾರಿ ಶಾಲೆಗೆ ಕುಡಿಯುವ ನೀರು ವಿದ್ಯುತ್ತ, ರಸ್ತೆ ಸಮಸ್ಯೆ ಶೀಘ್ರದಲ್ಲೇ ಇತ್ಯಾರ್ಥ ಪಡಿಸದ್ದಿದರೆ ಶಾಲಾ ಮಕ್ಕಳು ಮತ್ತು ಪೋಷಕರು ಸೇರಿ ಯಾದಗಿರಿ ಯಿಂದ ವಡಗೇರಾ ಹೋಗುವ ಹಾಲಗೇರಾ ಗ್ರಾಮದ ವಿಠ್ಠಲ್ ಹೇರೂರುಅವರ ಸರ್ಕಲ್‌ನಲ್ಲಿ ರಸ್ತೆ ತಡೆ ಜಿಲ್ಲಾಡಳಿತದ ವಿರುದ್ಧ ಬೃಹತ್ ಪ್ರತಿಭಟನೆ ನಡೆಸಲಾಗುವುದುದೆಂದು ಎಚ್ಚರಿಕೆ ನೀಡಿದ್ದಾರೆ.ಇದೇ ಸಂದರ್ಬದಲ್ಲಿ ಭೀಮಶಂಕರ, ಮಲ್ಲೇಶಿ, ನಂದಪ್ಪ ಯಲ್ಲಪ್ಪ ಬಸವರಾಜ, ಶರಣಪ್ಪ, ಅಬ್ದುಲ್ ಬಾಷಾ, ಮೈನೂದ್ದಿನ್, ಮಲ್ಲಣ್ಣಗೌಡ, ಮರಿಲಿಂಗಪ್ಪ, ಮಲ್ಲಪ್ಪಗೌಡ ಪೋಲಿಸ್ ಪಾಟೀಲ್, ನರಸಪ್ಪ, ವೆಂಕಟೇಶ, ಶಿವಲಿಂಗಪ್ಪ, ದೊಡ್ಡ ಮಾಳಪ್ಪ, ಬೀರಪ್ಪ ಪೂಜಾರಿ, ಹಣಮಂತ ಬಾಗ್ಲಿ ಶಿವಬಸಪ್ಪ ಸಿದ್ದಪ್ಪ ಸೇರಿದಂತೆ ಅನೇಕ ಗ್ರಾಮಸ್ಥರು ಇದ್ದರು. ಸ್ವತಂತ್ರ ಸಿಕ್ಕು 75 ವರ್ಷ ಗತಿಸಿದರು ಸರಕಾರಿ ಶಾಲೆ ದೇವಸ್ಥಾನ ದರ್ಗಾಗಳಿಗೆ ಮೂಲ ಸೌಕರ್ಯ ಸಿಗದಿರುವುದು ದೂರ ದೃಷ್ಟಕರು ಸಂಗತಿ. ಶಾಲೆ ದೇವಸ್ಥಾನ ದರ್ಗಾಗಳಿಗೆ ಸಾರ್ವಜನಿಕರ ಸಾಮರಷ್ಯ ಕಾಣುವು ಸ್ಥಳಗಳಾಗಿದ್ದು ಅವುಗಳನ್ನು ಅಭಿವೃದ್ಧಿ ಪಡಿಸಿ ನಿರ್ವಹಣೆ ಮಾಡಿಕೊಂಡು ಹೋಗುವುದು ನಮ್ಮೆಲ್ಲರ ಜವಬ್ದಾರಿಯಾಗಿದೆ

**Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.**
**Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE**